ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

EMAIL : dairyadadaari@gmail.com ಸಂಪುಟ: 01 ಸಂಚಿಕೆ: 126

ಬೆಲೆ ರೂ : 2.00

ರಾಯಚೂರು

ಪುಟ: 4

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795 ಶುಕ್ರವಾರ: 24-04-2026


## ಎಸ್‌ಎಸ್‌ಎಲ್‌ಸಿ ಪರೀಕ್ಷೆ-1ರ ಫಲಿತಾಂಶ ಪ್ರಕಟ : ಐತಿಹಾಸಿಕ ಶೇ.94.1ರಷ್ಟು ರಿಸಲ್ಟ್

**ಬೆಂಗಳೂರು,ಏ.23–** ದ್ವಿತೀಯ ಪಿಯುಸಿ ಪರೀಕ್ಷಾ ಫಲಿತಾಂಶದಂತೆ ಎಸ್‌ಎಸ್‌ಎಲ್‌ಸಿ ಪರೀಕ್ಷೆ-1ರ ಫಲಿತಾಂಶದಲ್ಲೂ ಐತಿಹಾಸಿಕ ಶೇ.94.1 ರಷ್ಟು ಫಲಿತಾಂಶ ಬಂದಿದೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧು ಬಂಗಾರಪ್ಪ ತಿಳಿಸಿದರು. ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಳಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಎಂದಿನಂತೆ ಈ ಬಾರಿಯೂ ಶೇ.96.18 ರಷ್ಟು ಬಾಲಕಿಯರು ತೇರ್ಗಡೆಯಾಗಿ ಮೇಲುಗೈ ಸಾಧಿಸಿದ್ದಾರೆ ಎಂದರು.




2025–26ನೇ ಸಾಲಿನಲ್ಲಿ ಪರೀಕ್ಷೆಗೆ ಹಾಜರಾಗಿದ್ದ 7,70,209 ವಿದ್ಯಾರ್ಥಿಗಳಲ್ಲಿ 7,24,794 ವಿದ್ಯಾರ್ಥಿಗಳು ತೇರ್ಗಡೆ ಹೊಂದಿದ್ದಾರೆ. ಕಳೆದ ವರ್ಷ ಶೇ.80.4 ರಷ್ಟು ಫಲಿತಾಂಶ ಬಂದಿತ್ತು. ಈ ಬಾರಿ ಸುಧಾರಣಾ ಕ್ರಮಗಳನ್ನು ಕೈಗೊಂಡ ಪರಿಣಾಮ ಫಲಿತಾಂಶದಲ್ಲಿ ಹೆಚ್ಚಳವಾಗಿದೆ ಎಂದು ಹೇಳಿದರು.

3,92,922 ಬಾಲಕಿಯರು ಪರೀಕ್ಷೆಗೆ ಹಾಜರಾಗಿದ್ದು, 3,77,922 ಬಾಲಕಿಯರು ತೇರ್ಗಡೆಯಾಗಿದ್ದಾರೆ. 3,77,287 ಬಾಲಕರು ಪರೀಕ್ಷೆಗೆ ಹಾಜರಾಗಿದ್ದು, 3,46,872 ಬಾಲಕರು ತೇರ್ಗಡೆಯಾಗಿದ್ದು, ಶೇ.91.94 ರಷ್ಟು ಉತ್ತೀರ್ಣರಾಗಿದ್ದಾರೆ. ಕಳೆದ ವರ್ಷಕ್ಕೆ ಹೋಲಿಸಿದರೆ ಈ ಬಾರಿ ಬಾಲಕರ ತೇರ್ಗಡೆ ಗಣನೀಯವಾಗಿ ಹೆಚ್ಚಳವಾಗಿದೆ ಎಂದರು.

4,42,280 ಗ್ರಾಮೀಣ ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, 4,19,261 ಗ್ರಾಮೀಣ ವಿದ್ಯಾರ್ಥಿಗಳು ತೇರ್ಗಡೆಯಾಗಿದ್ದು, ಶೇ.94.80 ರಷ್ಟು ಫಲಿತಾಂಶ ಬಂದಿದ್ದು, ನಗರ ಪ್ರದೇಶಕ್ಕಿಂತ ಗ್ರಾಮೀಣ ವಿದ್ಯಾರ್ಥಿಗಳೇ ಹೆಚ್ಚು ತೇರ್ಗಡೆ ಹೊಂದಿದ್ದಾರೆ ಎಂದು ಮಾಹಿತಿ ನೀಡಿದರು.

ನಗರ ಪ್ರದೇಶದಲ್ಲಿ 3,27,929 ವಿದ್ಯಾರ್ಥಿಗಳು ಪರೀಕ್ಷೆ ತೆಗೆದುಕೊಂಡಿದ್ದು, 3,05,533 ವಿದ್ಯಾರ್ಥಿಗಳು ತೇರ್ಗಡೆಯಾಗಿ ಶೇ.93.2 ರಷ್ಟು ಉತ್ತೀರ್ಣರಾಗಿದ್ದಾರೆ. 6,176 ಶಾಲೆಗಳಲ್ಲಿ ಶೇ.100 ರಷ್ಟು ಫಲಿತಾಂಶ ಬಂದಿದೆ. ಅದರಲ್ಲಿ 2,393 ಸರ್ಕಾರಿ ಶಾಲೆಗಳು ಸೇರಿವೆ. 27 ಶಾಲೆಗಳಲ್ಲಿ ಶೂನ್ಯ ಫಲಿತಾಂಶ ಬಂದಿದ್ದು, ಅದರಲ್ಲಿ ಯಾವುದೇ ಸರ್ಕಾರಿ ಶಾಲೆ ಇಲ್ಲ ಎಂದು ಹೇಳಿದರು.

ಸರ್ಕಾರಿ ಶಾಲೆಗಳಲ್ಲಿ ಶೇ.93.97, ಅನುದಾನಿತ ಶಾಲೆಗಳಲ್ಲಿ ಶೇ.92.94, ಅನುದಾನರಹಿತ ಶಾಲೆಗಳಲ್ಲಿ ಶೇ.95.04 ರಷ್ಟು ಫಲಿತಾಂಶ ಬಂದಿದೆ ಎಂದು ಅವರು ಮಾಹಿತಿ ನೀಡಿದರು.

**ಅತೀ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳು :**
625 ಅಂಕಗಳನ್ನು 7 ವಿದ್ಯಾರ್ಥಿಗಳು, 624 ಅಂಕಗಳನ್ನು 21 ವಿದ್ಯಾರ್ಥಿಗಳು, 623 ಅಂಕಗಳನ್ನು 28 ವಿದ್ಯಾರ್ಥಿಗಳು, 622 ಅಂಕಗಳನ್ನು 74 ವಿದ್ಯಾರ್ಥಿಗಳು, 621 ಅಂಕಗಳನ್ನು 98 ವಿದ್ಯಾರ್ಥಿಗಳು, 620 ಅಂಕಗಳನ್ನು 150 ವಿದ್ಯಾರ್ಥಿಗಳು ಪಡೆದಿದ್ದು, ಆಯಾ ಶಾಲೆಗಳಿಗೆ ಕೀರ್ತಿ ತಂದಿದ್ದಾರೆ ಎಂದು ಹೇಳಿದರು.

ಅಥಣಿ ತಾಲ್ಲೂಕಿನ ಕಟಗೇರಿಯ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿನಿ ಪ್ರಾರ್ಥನಾ ನಾಗಪ್ಪ ಬಿರಾದಾರ್ ಪಾಟೀಲ್, ಚನ್ನಗಿರಿ ತಾಲ್ಲೂಕಿನ ಕಬ್ಬಾಲದ ವಿದ್ಯಾಲಕ್ಷ್ಮಿ ಇಂಗ್ಲಿಷ್ ಮಾಧ್ಯಮ ಪ್ರೌಢಶಾಲೆಯ ವಿದ್ಯಾರ್ಥಿ ಭರತ್ ಜಿ., ಚಿಕ್ಕಮಗಳೂರು ತಾಲ್ಲೂಕಿನ ಸೇಂಟ್ ಮೇರೀಸ್ ಹೈಸ್ಕೂಲ್ ಪೋರ್ಟ್‌ನ ವಿದ್ಯಾರ್ಥಿನಿ ಬೃಂದಾ ಎಂ. ತಪ್ಸೆ, ಸದಾಶಿವನಗರದ ಪೂರ್ಣಪ್ರಜ್ಞಾ ಎಜುಕೇಷನ್ ಸೆಂಟರ್‌ನ ವಿದ್ಯಾರ್ಥಿ ಧನುಷ್‌ಸುಧೀರ್ ಮೈಸೂರು, ಕುಂದಾಪುರದ ಮದರ್ ತೆರೇಸಾ ಮೆಮೊ ಶಾಲೆಯ ವಿದ್ಯಾರ್ಥಿ ಪ್ರಿತಂ ಜಿ. ಪೂಜಾರಿ, ಮುದ್ದೇಬಿಹಾಳ ತಾಲ್ಲೂಕಿನ ನಾಗರಬೆಟ್ಟದ ಆಕ್ಸ್‌ಫರ್ಡ್ ಇಂಗ್ಲಿಷ್ ಮಾಧ್ಯಮ ಪ್ರೌಢಶಾಲೆಯ ವಿದ್ಯಾರ್ಥಿನಿ ಸೌಜನ್ಯ ಬಸವರಾಜ್ ಕಂದಕೂರ್ ಹಾಗೂ ಮಾನ್ವಿ ತಾಲ್ಲೂಕಿನ ಬಿಆರ್‌ವಿ ಇಂಗ್ಲಿಷ್ ಮಾಧ್ಯಮ ಪ್ರೌಢಶಾಲೆಯ ವಿದ್ಯಾರ್ಥಿ ಸುಖದೇವ್ ಅವರು ತಲಾ 625 ಕ್ಕೆ 625 ಅಂಕಗಳನ್ನು ಪಡೆದಿದ್ದಾರೆ ಎಂದು ಸಚಿವರು ಮಾಹಿತಿ ನೀಡಿದರು.

ಮಾ.18 ರಿಂದ ಏ.2 ರವರೆಗೆ 2870 ಪರೀಕ್ಷಾ ಕೇಂದ್ರಗಳಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆ ನಡೆದಿದ್ದು, ನೋಂದಣಿಯಾಗಿದ್ದ 8,66,046 ವಿದ್ಯಾರ್ಥಿಗಳಲ್ಲಿ 8,56,516 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದರು. ಒಟ್ಟಾರೆ ಶೇ.88.73 ರಷ್ಟು ತೇರ್ಗಡೆಯಾಗಿದ್ದಾರೆ. ಪುನರಾವರ್ತಿತ ಅಭ್ಯರ್ಥಿಗಳು ಶೇ.53.43ರಷ್ಟು, ಖಾಸಗಿ ಪುನರಾವರ್ತಿತ ವಿದ್ಯಾರ್ಥಿಗಳು ಶೇ.8.42 ರಷ್ಟು ಹಾಗೂ ಖಾಸಗಿ ಫ್ರೆಶ್ ಅಭ್ಯರ್ಥಿಗಳು ಶೇ.60.45 ರಷ್ಟು ತೇರ್ಗಡೆಯಾಗಿದ್ದಾರೆ ಎಂದು ಹೇಳಿದರು.

2ನೇಪುಟಕ್ಕೆ►

## ಪಟ್ಟಣದ ಬಿ.ವಿ.ಆರ್.ಶಾಲೆಯ ವಿದ್ಯಾರ್ಥಿ ಸುಖದೇವ ರಾಜ್ಯಕ್ಕೆ ಪ್ರಥಮ ರ್‍ಯಾಂಕ್



ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ಬಿ.ವಿ.ಆರ್. ಅಂಗ್ಲಮಾಧ್ಯಮ ಫ್ರೌಡಶಾಲೆಯ ವಿದ್ಯಾರ್ಥಿ ಸುಖದೇವ ತಂದೆ ಪರಶುರಾಮ್ ಎಸ್.ಎಸ್. ಎಲ್.ಸಿ, ವಾರ್ಷಿಕ ಪರೀಕ್ಷೆ ಯಲ್ಲಿ 625 ಅಂಕಗಳಿಗೆ 625 ಅಂಕಗಳನ್ನು ಪಡೆಯುವ ಮೂಲಕ ರಾಜ್ಯಮಟ್ಟದಲ್ಲಿ ಪ್ರಥಮ ಸ್ಥಾನವನ್ನುಪಡೆದಿದ್ದಾರೆ.

ತಾ.ಕ್ಷೇತ್ರ ಶಿಕ್ಷಣಾಧಿಕಾರಿ ಚಂದ್ರಶೇಖರ ,ಡಿ, ಬಿ.ವಿ.ಆರ್. ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಬಿ.ವಿ.ರೆಡ್ಡಿ, ಕಾರ್ಯದರ್ಶಿ ಪದ್ಮವತಿ, ಮುಖ್ಯಗುರು ಸರ್‌ಮಾತ್‌ಖಾನ್ ರವರು ವಿದ್ಯಾರ್ಥಿಗೆ ಅಭಿನಂದನೆಯನ್ನು ತಿಳಿಸಿದ್ದಾರೆ.


ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ

6360866626


## ಭಗೀರಥ ಮಹರ್ಷಿಯ ಆದರ್ಶಗಳನ್ನು ಮೈಗೂಡಿಸಿಕೊಳ್ಳಿ: ಸಂಸದ ಜಿ.ಕುಮಾರ್ ನಾಯಕ




ಧೈರ್ಯದ ದಾರಿ

**ರಾಯಚೂರು :**ಪ್ರಯತ್ನ ಹಾಗೂ ಸಾಧನೆಯ ದ್ಯೋತಕವಾದ ಭಗೀರಥ ಮಹರ್ಷಿಯ ಆದರ್ಶಗಳನ್ನು ಎಲ್ಲರೂ ಜೀವನದಲ್ಲಿ ಮೈಗೂಡಿಸಿಕೊಳ್ಳಬೇಕು ಎಂದು ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ್ ನಾಯಕ ಅವರು ಹೇಳಿದರು.

ಏಪ್ರಿಲ್ 23ರ ಗುರುವಾರ ದಂದು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ಶ್ರೀ ಭಗೀರಥ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಭಗೀರಥರು ಪೌರಾಣಿಕ ಪುರುಷರು. ಸಮಾಜದಲ್ಲಿ ಇಂದಿಗೂ ಕಠಿಣ ಪರಿಶ್ರಮಕ್ಕೆ ಭಗೀರಥ ಯತ್ನ ಎಂದೇ ಉದಾಹರಣೆ ನೀಡಲಾಗುತ್ತದೆ. ಭಗೀರಥರು ಎಂದರೆ ಸಾಧನೆಯ ದ್ಯೋತಕವಾಗಿದ್ದು, ಸಾಕ್ಷತ್ ಗಂಗೆಯನ್ನು ಧರೆಗಿಳಿಸಿದ ಮಹಾಪುರುಷರು ಎಂದು ಬಣ್ಣಿಸಿದರು.

ಯಾವುದೇ ಕೆಲಸ ಮಾಡಬೇಕಾದರೆ ಏಕಾಗ್ರತೆಯಿಂದ ಮಾಡಬೇಕು. ಅದಕ್ಕೆ ಶ್ರೀ ಭಗೀರಥ ಮಹರ್ಷಿ ಉದಾಹರಣೆಯಾಗಿದ್ದಾರೆ. ಪೋಷಕರು ಮಕ್ಕಳಿಗೂ ಉತ್ತಮ ಶಿಕ್ಷಣವನ್ನು ನೀಡುವ ಮೂಲಕ ಸಮಾಜವನ್ನು ಬದಲಾವಣೆ ಮಾಡಬೇಕು. ಸರ್ಕಾರದ ವಿವಿಧ ಸೌಲಭ್ಯಗಳನ್ನು ಸರಿಯಾಗಿ ಬಳಕೆ ಮಾಡಿಕೊಳ್ಳಬೇಕು. ಸಮಾಜಕ್ಕೆ ಬೇಕಾಗುವ ನೆರವು ನೀಡಲಾಗುತ್ತದೆ ಎಂದರು.

ಈ ವೇಳೆ ರಾಯಚೂರು ತಹಶಿಲ್ದಾರ್ ಸುರೇಶ ವರ್ಮ ಅವರು ಮಾತನಾಡಿ, ಶ್ರೀ ಭಗೀರಥ ಜಯಂತಿ ಕರ್ನಾಟಕದಲ್ಲಿ ಅತ್ಯಂತ ದೊಡ್ಡ ಪ್ರಮಾಣದಲ್ಲಿ ಜಯಂತಿ ರಾಯಚೂರಿನಲ್ಲಿ ಆಚರಣೆ ಮಾಡಲಾಗುತ್ತಿದೆ. ಭಾರತದ ಇತಿಹಾಸದಲ್ಲಿ ಬಹು ಸಂಖ್ಯೆ ಜನ ಸಂಖ್ಯೆಕ್ಕಿಂತ ಕಡಿಮೆ ಜನ ಸಂಖ್ಯೆ ಇರುವವರು ಸಾಧನೆ ಮಾಡಿದ್ದಾರೆ. ಜಯಂತಿ ಕೇವಲ ಒಂದು ದಿನಕ್ಕೆ ಸೀಮಿತ ಗೊಳ್ಳದೆ. ವರ್ಷವಿಡೀ ಅವರ ತತ್ವ, ಆಚಾರ ವಿಚಾರಗಳನ್ನು ಅಳವಡಿಸಿಕೊಳ್ಳಬೇಕು ಎಂದರು.

2ನೇಪುಟಕ್ಕೆ

## ತಾಪಮಾನ ಹೆಚ್ಚಳ ಹಿನ್ನಲೆಯಲ್ಲಿ ಕಾರ್ಮಿಕರು, ಬೀದಿ ಬದಿ ವ್ಯಾಪಾರಸ್ಥರು, ವಾಹನ ಚಾಲಕರು ಆರೋಗ್ಯದ ಸುರಕ್ಷತೆ ಅನುಸರಿಸಲು ಜಿಲ್ಲಾಧಿಕಾರಿ ನಿತೀಶ್ ಕೆ. ಮನವಿ

ಧೈರ್ಯದ ದಾರಿ



**ರಾಯಚೂರು:** ಪ್ರಸ್ತುತ ಬೇಸಿಗೆ ಹಿನ್ನಲೆಯಲ್ಲಿ ಸೂರ್ಯನ ಶಾಖದಿಂದ ತಾಪಮಾನ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿರುವುದರಿಂದ ಹೀಟ್ ವೇವ್ ಸ್ಟ್ರೋಕ್ (ಶಾಖದ ಹೊಡೆತ) ದಿಂದಾಗಿ ಕಾರ್ಮಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ಸಾಧ್ಯತೆಯಿರುವುದರಿಂದ ಕಟ್ಟಡ ಮತ್ತು ಇತರ ನಿರ್ಮಾಣ ಕಾರ್ಮಿಕರ, ಬೀದಿ ಬದಿ ವ್ಯಾಪಾರಸ್ಥರ, ವಾಹನ ಚಾಲಕರ ಮತ್ತು ಇತರೆ ವರ್ಗದ ಎಲ್ಲಾ ಕೆಲಸಗಾರರ ಆರೋಗ್ಯವನ್ನು ಕಾಪಾಡುವ ಮತ್ತು ಸುರಕ್ಷತೆ ಅನುಸರಿಸಬೇಕೆಂದು ಜಿಲ್ಲಾಧಿಕಾರಿಗಳು ಆಗಿರುವ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರಾದ ನಿತೀಶ್ ಕೆ. ಅವರು ಕೋರಿದ್ದಾರೆ.

ಜಿಲ್ಲಾಡಳಿತ ಮತ್ತು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರವು ಮುಂಜಾಗ್ರತಾ ಕ್ರಮವಾಗಿ ಹೊರಗಡೆ ಕೆಲಸ ನಿರ್ವಹಿಸುವ ಕಟ್ಟಡ ಮತ್ತು ಇತರ ನಿರ್ಮಾಣ ಕಾರ್ಮಿಕರ, ಬೀದಿ ಬದಿ ವ್ಯಾಪಾರಸ್ಥರ, ವಾಹನ ಚಾಲಕರ ಮತ್ತು ಇತರೆ ವರ್ಗದ ಎಲ್ಲಾ ಕೆಲಸಗಾರರ ಆರೋಗ್ಯವನ್ನು ಕಾಪಾಡುವ ಮತ್ತು ಸುರಕ್ಷತೆಯನ್ನು ಒದಗಿಸುವ ದೃಷ್ಟಿಯಿಂದ ರಾಯಚೂರು ಜಿಲ್ಲೆಯ ಎಲ್ಲಾ ಕಟ್ಟಡ ಮತ್ತು ಇತರೆ ನಿರ್ಮಾಣದಾರ ಮತ್ತು ಇತರೆ ಉದ್ದಿಮೆಗಳ ಮಾಲೀಕರಿಗೆ ಮತ್ತು ಕಾರ್ಮಿಕರಿಗೆ ಈ ಕೆಳಕಂಡ ಸಲಹೆ-ಸೂಚನೆಗಳನ್ನು ನೀಡಿ ಮುಂದಿನ ದಿನಗಳಲ್ಲಿ ತಮ್ಮ ಸುರಕ್ಷತೆಯನ್ನು ಕಾಪಾಡುವ ಹಿನ್ನಲೆಯಲ್ಲಿ ಜಿಲ್ಲಾಡಳಿತದೊಂದಿಗೆ ಸಹಕರಿಸುವಂತೆ ತಿಳಿಸಿದ್ದಾರೆ.

ಕೆಲಸದ ಸ್ಥಳದಲ್ಲಿ ಕಾರ್ಮಿಕರಿಗೆ ತಂಪಾದ ಕುಡಿಯುವ ನೀರು ಮತ್ತು ಎಲೆಕ್ಟ್ರೋಲೈಟ್ ಪೂರಕಗಳ ವ್ಯವಸ್ಥೆಯನ್ನು ಮಾಲೀಕರು ಮಾಡಬೇಕು. ಡಿ-ಹೈಡ್ರೇಟೆಡ್ ಆಗದಿರಲು ಕಾರ್ಮಿಕರು ಮತ್ತು ಎಲ್ಲರೂ ಪ್ರತಿ 20 ನಿಮಿಷಗಳಿಗೊಮ್ಮೆ ಅಥವಾ ಹೆಚ್ಚು ಭಾರಿ ನೀರನ್ನು ಕುಡಿಯುವಂತೆ ಹಾಗೂ ಕೆಲಸದ ಮದ್ಯದಲ್ಲಿ ವಿಶ್ರಾಂತಿ ಪಡೆದು ಕೆಲಸ ಮಾಡಲು ಗಮನ ವಹಿಸಬೇಕು. ಶ್ರಮದಾಯಕ ಮತ್ತು ಹೊರಾಂಗಣ ಚಟುವಟಿಕೆಗಳನ್ನು ತಾಪಮಾನ ಕಡಿಮೆ ಇರುವ ಸಮಯದಲ್ಲಿ, ಅಂದರೆ ಬೆಳಗಿನ ಅಥವಾ ಸಂಜೆಯ ಸಮಯದಲ್ಲಿ ನಿರ್ವಹಿಸುವುದು. ಆದಷ್ಟು ಕಾರ್ಮಿಕರು ಬೆಳಿಗ್ಗೆ 11 ರಿಂದ ಸಂಜೆ 04 ರವರೆಗೆ ನೇರವಾಗಿ ಸೂರ್ಯನ ಬಿಸಿಲಿನಲ್ಲಿ ಕೆಲಸ ನಿರ್ವಹಿಸದಂತೆ ಮಾಲೀಕರು ಎಚ್ಚರ ವಹಿಸುವುದು. ಸಾಧ್ಯವಾದಲ್ಲಿ ಬೃಹತ್ ಕಟ್ಟಡ ಮತ್ತು ಇತರೆ ನಿರ್ಮಾಣದಾರರು ಕೆಲಸದ ಪಾಳಿಯನ್ನು ರಾತ್ರಿ ವೇಳೆ ಮಾಡಬಹುದಾಗಿರುತ್ತದೆ.

ಹೆಚ್ಚಿನ ಬಿಸಿಲಿನ ತಾಪಮಾನವಿರುವ ಸಮಯದಲ್ಲಿ ಕಾರ್ಮಿಕರಿಗೆ ಕೆಲಸ ಮಾಡಲು ಅನುಕೂಲವಾಗುವಂತೆ ನೆರಳು ಇರುವ ಪ್ರದೇಶವನ್ನು ಮಾಲೀಕರು ಒದಗಿಸುವುದು ಅಥವಾ ನೌಕರರು ಮತ್ತು ಕಾರ್ಮಿಕರಿಗೆ ಕೆಲಸದ ಸಮಯವನ್ನು ಕಾರ್ಮಿಕರೊಂದಿಗೆ ಸಮಾಲೋಚಿಸಿ ಮರು-ನಿಗದಿಪಡಿಸಿಕೊಳ್ಳುವುದು. ಕೆಲಸದ ಸ್ಥಳದ ಬಳಿ ವಿಶ್ರಾಂತಿ ಪಡೆಯಲು ಗಾಳಿ ಬೆಳಕು ಮತ್ತು ಕುಡಿಯುವ ನೀರಿನ ವ್ಯವಸ್ಥೆಯೊಂದಿಗೆ ತಾತ್ಕಾಲಿಕ ಶೆಡ್ ಗಳನ್ನು ಮಾಲೀಕರು ನಿರ್ಮಿಸಬೇಕು.

ಕಾರ್ಮಿಕರಿಗಾಗಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯವು ಹೊರಡಿಸಿದ ಆರೋಗ್ಯ ಸಲಹೆಯನ್ನು ಅನುಸರಿಸಿ, ಕಾರ್ಮಿಕರ ನಿಯಮಿತ ಆರೋಗ್ಯ ತಪಾಸಣೆಯನ್ನು ಖಚಿತಪಡಿಸಿಕೊಳ್ಳಲು ಆರೋಗ್ಯ ಇಲಾಖೆಯೊಂದಿಗೆ ಸಮನ್ವಯ ಸಾಧಿಸುವುದು. ಕೆಲಸದ ಸಮಯದಲ್ಲಿ ಕಾರ್ಮಿಕರು ಆದಷ್ಟು ಹತ್ತಿಯ ಮತ್ತು ಶ್ವೇತ ವರ್ಣದ ತುಂಬು ತೋಳಿನ ಅಂಗಿ/ಬಟ್ಟೆ ಮತ್ತು ಟೋಪಿ, ಕೂಲಿಂಗ್ ಗ್ಲಾಸ್ ಧರಿಸುವುದು.

ಒಳಾಂಗಣದಲ್ಲಿ ಕೆಲಸ ಮಾಡುವ ಕಾರ್ಮಿಕರಿಗೆ ಸಂಬಂಧಿಸಿದಂತೆ ಕೊಠಡಿಯ ತಾಪಮಾನವನ್ನು ಕಡಿಮೆ ಮಾಡಲು ಸೂಕ್ತ ಕ್ರಮಗಳನ್ನು ಮಾಲೀಕರು ತೆಗೆದುಕೊಳ್ಳಬೇಕು. ಹೀಟ್ ಸ್ಟ್ರೋಕ್ ಲಕ್ಷಣಗಳನ್ನು

2ನೇಪುಟಕ್ಕೆ

## ಬಾಗಲವಾಡದಲ್ಲಿ ಮಹಿಳಾ ಜಾಗೃತ ಸಂಘಟನೆಯಿಂದ ಸಂಭ್ರಮದ 'ಅಂಬೇಡ್ಕರ್ ಹಬ್ಬ'



ಧೈರ್ಯದ ದಾರಿ

**ಸಿರಿವಾರ:** ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಜಯಂತಿ ಅಂಗವಾಗಿ ತಾಲ್ಲೂಕಿನ ಬಾಗಲವಾಡ ಗ್ರಾಮದಲ್ಲಿ ಮಹಿಳಾ ಜಾಗೃತ ಸಂಘಟನೆಯ ವತಿಯಿಂದ ಬುಧವಾರ 'ಅಂಬೇಡ್ಕರ್ ಹಬ್ಬ'ವನ್ನು ಅತ್ಯಂತ ಅರ್ಥಪೂರ್ಣವಾಗಿ ಆಚರಿಸಲಾಯಿತು. ಮಹಿಳೆಯರು ಸಮಾಜದ ಮುಖ್ಯವಾಹಿನಿಗೆ ಬರಲಿ: ಚಿನ್ನಮ್ಮ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಸಂಘಟನೆಯ ಅಧ್ಯಕ್ಷೆ ಚಿನ್ನಮ್ಮ, "ಕಳೆದ 25 ವರ್ಷಗಳಿಂದ ನಮ್ಮ ಸಂಘಟನೆಯು ಮಹಿಳೆಯರ ಏಳಿಗೆಗಾಗಿ ನಿರಂತರವಾಗಿ ಶ್ರಮಿಸುತ್ತಿದೆ. ಮಹಿಳೆಯರು ಮನೆಯ ನಾಲ್ಕು ಗೋಡೆಗಳಿಗೆ ಸೀಮಿತವಾಗದೆ ಸಮಾಜದ ಮುಖ್ಯವಾಹಿನಿಗೆ ಬರಬೇಕು. ಕೂಲಿ ಕಾರ್ಮಿಕರು ತಮ್ಮ ಹಕ್ಕುಗಳಿಗಾಗಿ ಧ್ವನಿ ಎತ್ತಬೇಕು," ಎಂದು ಹೇಳಿದರು.

2ನೇಪುಟಕ್ಕೆ

## ಸಿರವಾರ: ತಹಸಿಲ್ದಾರ್ ಕಾರ್ಯಾಲಯದಲ್ಲಿ ಭಗೀರಥ ಮಹರ್ಷಿ ಜಯಂತಿ ಆಚರಣೆ

ಧೈರ್ಯದ ದಾರಿ



**ಸಿರವಾರ:** ಇಲ್ಲಿನ ತಹಸಿಲ್ದಾರ್ ಕಾರ್ಯಾಲಯದ ಆವರಣದಲ್ಲಿ ಇಂದು ಭಗೀರಥ ಮಹರ್ಷಿಗಳ ಜಯಂತಿಯನ್ನು ಅತ್ಯಂತ ಭಕ್ತಿ ಪೂರ್ವಕವಾಗಿ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಶಿರಸ್ತೇದಾರರು ಭಗೀರಥ ಮಹರ್ಷಿಗಳ ಭಾವಚಿತ್ರಕ್ಕೆ ವಿಶೇಷ ಪೂಜೆ ಸಲ್ಲಿಸಿ, ಪುಷ್ಪಾರ್ಚನೆ ಮಾಡುವ ಮೂಲಕ ಗೌರವ ಸಮರ್ಪಿಸಿದರು.

ವರದಿಯ ಮುಖ್ಯಾಂಶಗಳು:

ಪೂಜಾ ಕಾರ್ಯಕ್ರಮ: ಶಿರಸ್ತೇದಾರರು ಮಹರ್ಷಿಗಳ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ದೀಪ ಬೆಳಗಿಸಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಛಲದ ಸಂಕೇತ: ಈ ಸಂದರ್ಭದಲ್ಲಿ ಮಾತನಾಡಿದ ಅವರು, "ಭಗೀರಥ ಮಹರ್ಷಿಗಳು ಅಸಾಧ್ಯವಾದುದನ್ನು ಸಾಧಿಸಿ ತೋರಿಸಿದವರು. ಅವರ ಕಠಿಣ ಪರಿಶ್ರಮ ಮತ್ತು ಛಲದ ಫಲವಾಗಿ ಗಂಗೆಯು ಧರೆಗೆ ಇಳಿದಳು. ಇಂದಿನ ಸಮಾಜಕ್ಕೆ ಅವರ ಜೀವನ ಮತ್ತು ಸಾಧನೆ ದೊಡ್ಡ ಪ್ರೇರಣೆಯಾಗಿದೆ," ಎಂದು ಸ್ಮರಿಸಿದರು.

ಸಿಬ್ಬಂದಿಗಳ ಉಪಸ್ಥಿತಿ: ಈ ಆಚರಣೆಯಲ್ಲಿ ಕಂದಾಯ ಇಲಾಖೆಯ ವಿವಿಧ ವಿಭಾಗದ ಅಧಿಕಾರಿಗಳು, ಕಚೇರಿಯ ಸಿಬ್ಬಂದಿ ವರ್ಗದವರು ಹಾಗೂ ಸ್ಥಳೀಯ ಪ್ರಮುಖರು ಉಪಸ್ಥಿತರಿದ್ದು

ಮೊದಲನೇ ಪುಟದಿಂದ

# ಎಸ್‌ಎಸ್‌ಎಲ್‌ಸಿ ಪರೀಕ್ಷೆ-1ರ ಫಲಿತಾಂಶ ಪ್ರಕಟ : ಐತಿಹಾಸಿಕ ಶೇ.94.1ರಷ್ಟು ರಿಸಲ್ಟ್

**ವಿದ್ಯಾರ್ಥಿಗಳಿಗೆ ಫಲಿತಾಂಶ ರವಾನೆ :** ಈ ಬಾರಿಯ ಫಲಿತಾಂಶವನ್ನು ಎಸ್‌ಎಂಎಸ್ ಮೂಲಕ ಮಧ್ಯಾಹ್ನ 11.50 ಗಂಟೆಗೆ ತಲುಪಿಸಲಾಗಿದೆ. ಇದೇ ಮೊದಲ ಬಾರಿಗೆ ಡಿಜಿಲಾಕರ್‌ನಲ್ಲಿ ಅಂಕಪಟ್ಟಿ ಲಭ್ಯವಾಗುವಂತೆ ಮಾಡಲಾಗಿದೆ ಎಂದು ತಿಳಿಸಿದರು.ಕನ್ನಡ ಮಾಧ್ಯಮದ ಶೇ.92.6 ರಷ್ಟು ಆಂಗ್ಲ ಮಾಧ್ಯಮದ ಶೇ.96.16 ರಷ್ಟು ವಿದ್ಯಾರ್ಥಿಗಳು ತೇರ್ಗಡೆ ಹೊಂದಿದ್ದಾರೆ.

ಶೇ.9.41 ರಷ್ಟು ಎ ಪ್ಲಸ್, ಶೇ.17.99 ರಷ್ಟು ಎ, ಶೇ.19.45 ರಷ್ಟು ಬಿ ಪ್ಲಸ್, ಶೇ.19.68 ರಷ್ಟು ಬಿ, ಶೇ.17.76 ರಷ್ಟು ಸಿ ಪ್ಲಸ್, ಶೇ.15.71 ರಷ್ಟು ಸಿ ಶ್ರೇಣಿಯಲ್ಲಿ ವಿದ್ಯಾರ್ಥಿಗಳು ತೇರ್ಗಡೆಯಾಗಿದ್ದಾರೆ.

ಶೇ.60 ಕ್ಕಿಂತ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳ ಸಂಖ್ಯೆ ಶೇ.60.5 ರಷ್ಟಿದೆ. ತೇರ್ಗಡೆಯ ಅಂಕಗಳನ್ನು ಶೇ.35 ರಿಂದ 33 ಕ್ಕೆ ಇಳಿಸಲಾಗಿದೆ. ಶೇ.33 ರಿಂದ 35 ರ ಅಂತರದಲ್ಲಿ 1,532 ವಿದ್ಯಾರ್ಥಿಗಳು ಮಾತ್ರ ತೇರ್ಗಡೆ ಹೊಂದಿದ್ದಾರೆ ಎಂದರು.

ಪ್ರಥಮ ಭಾಷೆಯಲ್ಲಿ ಶೇ.97.24, ದ್ವಿತೀಯ ಭಾಷೆಯಲ್ಲಿ ಶೇ.98.13, ತೃತೀಯ ಭಾಷೆಯಲ್ಲಿ ಶೇ.98.55, ಗಣಿತದಲ್ಲಿ ಶೇ.97.98, ವಿಜ್ಞಾನದಲ್ಲಿ ಶೇ.97.80, ಸಾಮಾಜಿಕ ವಿಜ್ಞಾನದಲ್ಲಿ ಶೇ.97.85 ರಷ್ಟು ವಿದ್ಯಾರ್ಥಿಗಳು ತೇರ್ಗಡೆಯಾಗಿದ್ದಾರೆ.

ಪ್ರಥಮ ಭಾಷೆ ಕನ್ನಡದಲ್ಲಿ 10,341, ಇಂಗ್ಲಿಷ್‌ನಲ್ಲಿ 43 ವಿದ್ಯಾರ್ಥಿಗಳು ಶೇ.100 ರಷ್ಟು ಅಂಕಗಳನ್ನು ಗಳಿಸಿದ್ದಾರೆ. 4099 ವಿಶೇಷ ಚೇತನ ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, 3,621 ವಿದ್ಯಾರ್ಥಿಗಳು ತೇರ್ಗಡೆಯಾಗಿ ಶೇ.88 ರಷ್ಟು ಫಲಿತಾಂಶ ಬಂದಿದೆ. ಶೇ.98.18 ರಷ್ಟು ಫಲಿತಾಂಶ ಪಡೆದು ಉಡುಪಿ ಮೊದಲ ಸ್ಥಾನ, ಶೇ.98.09 ರಷ್ಟು ಫಲಿತಾಂಶ ಪಡೆದು ಉ.ಕನ್ನಡ ದ್ವಿತೀಯ ಸ್ಥಾನ ಪಡೆದಿದೆ. ಕಳೆದ ಬಾರಿ ಕಡಿಮೆ ಫಲಿತಾಂಶವಿದ್ದ ಯಾದಗಿರಿ, ಚಿತ್ರದುರ್ಗ, ಕಲಬುರಗಿ ಜಿಲ್ಲೆಗಳಲ್ಲೂ ಫಲಿತಾಂಶದಲ್ಲಿ ಸುಧಾರಣೆಯಾಗಿದೆ. ಕಲ್ಯಾಣ ಕರ್ನಾಟಕದ 7 ಜಿಲ್ಲೆಗಳಲ್ಲಿ ಕಳೆದ ಬಾರಿಗಿಂತ ಈ ಬಾರಿ ಶೇ 19.9 ರಷ್ಟು ಫಲಿತಾಂಶ ಹೆಚ್ಚು ಬಂದಿದೆ. ಈ ಬಾರಿ ಶೇ.91.6 ರಷ್ಟು ಕಲ್ಯಾಣ ಕರ್ನಾಟಕದಲ್ಲಿ ಫಲಿತಾಂಶ ಬಂದಿದೆ ಎಂದು ಅವರು ಮಾಹಿತಿ ನೀಡಿದರು.

ಪತ್ರಿಕಾಗೋಷ್ಠಿಯಲ್ಲಿ ಶಾಲಾ ಶಿಕ್ಷಣ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ರಶಿ ವಿ. ಮಹೇಶ್, ಶಾಲಾ ಶಿಕ್ಷಣ ಇಲಾಖೆ ಆಯುಕ್ತರಾದ ವಿಕಾಸ್ ಕಿಶೋರ್ ಸುರಾಳ್ಕರ್, ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ ಅಧ್ಯಕ್ಷ ಪ್ರಕಾಶ್ ಜಿ ನಿತ್ತಾಳ್, ಮಂಡಳಿಯ ನಿರ್ದೇಶಕ ಗೋಪಾಲಕೃಷ್ಣ, ಪದವಿಪೂರ್ವ ಶಿಕ್ಷಣ ಇಲಾಖೆಯ ನಿರ್ದೇಶಕ ಭರತ್, ಸರ್ವಶಿಕ್ಷಣ ಕರ್ನಾಟಕದ ರಾಜ್ಯ ಯೋಜನಾ ನಿರ್ದೇಶಕರಾದ ವಿದ್ಯಾಕುಮಾರಿ ಉಪಸ್ಥಿತರಿದ್ದರು.

# ಭಗೀರಥ ಮಹರ್ಷಿಯ ಆದರ್ಶಗಳನ್ನು ಮೈಗೂಡಿಸಿಕೊಳ್ಳಿ: ಸಂಸದ ಜಿ.ಕುಮಾರ್ ನಾಯಕ

ಈಶ್ವರಿ ವಿಶ್ವವಿದ್ಯಾಲಯದ ಜಿಲ್ಲಾ ಸಂಚಾಲಕರಾದ ಸ್ಮಿತ್ ಅಮ್ಮನವರು ಮಾತನಾಡಿ, ಜೀವನದಲ್ಲಿ ಏನನ್ನಾದರೂ ಸಾಧಿಸಲು ಮಹರ್ಷಿ ಭಗೀರಥರಂತಹ ಪ್ರಯತ್ನ ಅಗತ್ಯವಿದೆ. ಭಗೀರಥರು ತಪಸ್ಸು ಮಾಡಿ ಗಂಗೆಯನ್ನು ಭೂಮಿಗೆ ತಂದ ಮಹಾಪುರುಷ. ಅವರ ಸಾಧನೆ, ಜೀವನಗಾಥೆಯನ್ನು ಪ್ರತಿಯೊಬ್ಬರೂ ಅರಿತು ತಮ್ಮ ಜೀವನದಲ್ಲಿ ಅವರ ಛಲ ಆದರ್ಶಗಳನ್ನು ರೂಢಿಸಿಕೊಳ್ಳಬೇಕು. ರಾಯಚೂರು ನಗರವನ್ನು ಪ್ಲಾಸ್ಟಿಕ್ ಮುಕ್ತ ನಗರವಾಗಿ ಮಾಡಲು ಪ್ರತಿಯೊಬ್ಬರೂ ಶ್ರಮಿಸಬೇಕು ಎಂದರು.

ಬಾಗಲಕೋಟೆಯ ಉಪನ್ಯಾಸಕರು ಹಾಗೂ ಯೋಗ ಶಿಕ್ಷಕರಾದ ರಾಘವೇಂದ್ರ ನೀಲನ್ನವರ ಅವರು ಶ್ರೀ ಭಗೀರಥ ಜಯಂತಿ ಕುರಿತು ವಿಶೇಷ ಉಪನ್ಯಾಸ ನೀಡಿದರು.ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನ: ಶ್ರೀ ಭಗೀರಥ ಜಯಂತಿ ಅಂಗವಾಗಿ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳಾದ ರೇಖಾ, ಕೃತಿಕಾ, ತ್ರಿವೇಣಿ, ಅಂಜಲಿ, ಶ್ರೀನಿವಾಸ್ ಹಾಗೂ ಪವಿತ್ರ ಎಂಬುವರಿಗೆ ವಿವಿಧ ಗಣ್ಯರಿಂದ ಸನ್ಮಾನಿಸಿ ಗೌರವಿಸಲಾಯಿತು.

ವಿವಿಧ ಗಣ್ಯರಿಂದ ಮಾಲಾರ್ಪಣೆ: ಶ್ರೀ ಭಗೀರಥ ಜಯಂತಿ ಅಂಗವಾಗಿ ನಗರದ ಶ್ರೀ ಲಕ್ಷ್ಮೀ ವೆಂಕಟೇಶ್ವರ ದೇವಸ್ಥಾನದ ಆವರಣದಲ್ಲಿ ರಾಯಚೂರು ನಗರ ಕ್ಷೇತ್ರದ ಶಾಸಕ ಡಾ.ಶಿವರಾಜ ಎಸ್.ಪಾಟೀಲ್, ರಾಯಚೂರು ಗ್ರಾಮೀಣ ಕ್ಷೇತ್ರದ ಶಾಸಕ ಬಸನಗೌಡ ದದ್ದಲ್, ಕೃಷಿ ಮಾರುಕಟ್ಟೆ ಅಧ್ಯಕ್ಷ ಮಲ್ಲಿಕಾರ್ಜುನಗೌಡ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಶು ಗಿರಿ., ರಾಯಚೂರು ಸಹಾಯಕ ಆಯುಕ್ತರಾದ ಡಾ.ಹಂಪಣ್ಣ ಸಜ್ಜನ್ ಅವರು ಸೇರಿದಂತೆ ವಿವಿಧ ಗಣ್ಯರಿಂದ ಮಾಲಾರ್ಪಣೆ ಮಾಡಿ, ಗೌರವ ಸಲ್ಲಿಸಲಾಯಿತು. ನಂತರ ನಗರದ ಗೀತಾಮಂದಿರ, ಸದರ ಬಜಾರ, ಸೂಪರ್ ಮಾರ್ಕೆಟ್, ಅಂಬೇಡ್ಕರ ಸರ್ಕಲ್ ಮಾರ್ಗವಾಗಿ ಪಂಡಿತ ಸಿದ್ದರಾಮ ಜಂಬಲದಿನ್ನಿ ರಂಗಮಂದಿರಕ್ಕೆ ಮೆರವಣಿಯು ಬಂದು ಸೇರಿತ್ತು.

ಇದೇ ಸಂದರ್ಭದಲ್ಲಿ ರಾಯಚೂರು ಮಹಾನಗರ ಪಾಲಿಕೆಯ ಆಡಳಿತ ವಿಭಾಗದ ಉಪ ಆಯುಕ್ತ ಶರಣಪ್ಪ, ಮುಖಂಡರಾದ ಕೆ.ಶಾಂತಪ್ಪ, ಚನ್ನಪ್ಪ ಗೌಡ, ಸಮಾಜದ ಮುಖಂಡರಾದ ಪಾಗುಂಟಪ್ಪ ಮಿರ್ಜಾಪುರ, ದೇವೇಂದ್ರಪ್ಪ, ವೆಂಕೋಬ, ಚಂದ್ರಶೇಖರ, ನಾಗರಾಜ್, ಸುರೇಖಾ, ಶ್ರೀನಿವಾಸ್, ನಿವೃತ್ತ ಡಿವೈಎಸ್ಪಿ ರಮೇಶ್ ಮೇಟಿ, ಸುಭಾಷ್ ಚಂದ್ರ, ನರಸಿಂಹಲು, ವರಮೂನಿ ಸೇರಿದಂತೆ ಇತರರು ಇದ್ದರು.

## ತಾಪಮಾನ ಹೆಚ್ಚಳ ಹಿನ್ನಲೆಯಲ್ಲಿ ಕಾರ್ಮಿಕರು, ಬೀದಿ ಬದಿ ವ್ಯಾಪಾರಸ್ಥರು, ವಾಹನ ಚಾಲಕರು ಆರೋಗ್ಯದ ಸುರಕ್ಷತೆ ಅನುಸರಿಸಲು ಜಿಲ್ಲಾಧಿಕಾರಿ ನಿತೀಶ್ ಕೆ. ಮನವಿ

ಹೊಂದಿರುವ ವ್ಯಕ್ತಿಯನ್ನು ತಂಪಾದ ಜಾಗಕ್ಕೆ ಸ್ಥಳಾಂತರಿಸಿ ಶಾಖದ ಹೊಡೆತದಿಂದ ಬಳಲುತ್ತಿರುವ ವ್ಯಕ್ತಿಯು ಕನಿಷ್ಟ ಬಟ್ಟೆಯನ್ನು ಹೊಂದಿರುವಂತೆ ನೋಡಿಕೊಂಡು ವ್ಯಕ್ತಿಗೆ ತಣ್ಣೀರಿನಿಂದ ಸ್ಪಾಂಜ್ ಮಾಡಬೇಕು ಅಥವಾ ಐಸ್ ಪ್ಯಾಕಗಳನ್ನು ಉಪಯೋಗಿಸುವುದು. ಹೀಟ್ ಸ್ಟ್ರೋಕ್ ಒಳಗಾದ ವ್ಯಕ್ತಿಗೆ ಯಾವುದೇ ಸುಧಾರಣೆ ಕಂಡುಬರದಿದ್ದರೆ, ಅವರನ್ನು ತಕ್ಷಣ ಆಸ್ಪತ್ರೆಗೆ ಸ್ಥಳಾಂತರಿಸಲು ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಾಗಲವಾಡದಲ್ಲಿ ಮಹಿಳಾ ಜಾಗೃತ ಸಂಘಟನೆಯಿಂದ ಸಂಭ್ರಮದ 'ಅಂಬೇಡ್ಕರ್ ಹಬ್ಬ'

ಬಾಬಾಸಾಹೇಬರ ವಿಚಾರಧಾರೆಗಳು ಕೇವಲ ಭಾಷಣಗಳಿಗೆ ಸೀಮಿತವಾಗಬಾರದು. ಮಹಿಳೆಯರು ಸಂಘಟಿತರಾದಾಗ ಮಾತ್ರ ಸಮಾಜದಲ್ಲಿ ಬದಲಾವಣೆ ಸಾಧ್ಯ. ಅಂಬೇಡ್ಕರ್ ಅವರ ಆಶಯದಂತೆ ಶಿಕ್ಷಣ ಮತ್ತು ಸಂಘಟನೆಗೆ ನಾವೆಲ್ಲರೂ ಹೆಚ್ಚಿನ ಒತ್ತು ನೀಡಬೇಕು ಎಂದು ಅವರು ಕರೆ ನೀಡಿದರು.

ವೈಚಾರಿಕ ಪುಸ್ತಕಗಳ ಬಿಡುಗಡೆಇದೇ ವೇದಿಕೆಯಲ್ಲಿ ಮಹಿಳಾ ಜಾಗೃತಿ ಮತ್ತು ನಾಯಕತ್ವದ ಕುರಿತಾದ 'ದಲಿತ ಜಾಗೃತ ಮಹಿಳಾ ಕೂಲಿ ಕಾರ್ಮಿಕರ ನಡಿಗೆ' ಹಾಗೂ 'ಸಮುದಾಯ ನಾಯಕತ್ವ' ಎಂಬ ಎರಡು ಪ್ರಮುಖ ಪುಸ್ತಕಗಳನ್ನು ಬಿಡುಗಡೆಗೊಳಿಸಲಾಯಿತು.

ವೈಚಾರಿಕ ಕಾರ್ಯಕ್ರಮಕ್ಕೆ ಮೆಚ್ಚುಗೆಗ್ರಾಮ ಪಂಚಾಯತ್ ಮಾಜಿ ಅಧ್ಯಕ್ಷ ಹಾಗೂ ವಕೀಲ ತಿಪ್ಪಣ್ಣ ಮಾತನಾಡಿ, ಗ್ರಾಮ ಮಟ್ಟದಲ್ಲಿ ಇಂತಹ ವೈಚಾರಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿರುವ ಮಹಿಳಾ ಸಂಘಟನೆಯ ಕಾರ್ಯ ನಿಜಕ್ಕೂ ಶ್ಲಾಘನೀಯ ಎಂದು ಬೆನ್ನು ತಟ್ಟಿದರು.

ಮಹಾಶಕ್ತಿ ಮಹಿಳಾ ಸಬಲೀಕರಣ ಸಂಘಟನೆಯ ರಾಜ್ಯಾಧ್ಯಕ್ಷೆ ವಿಜಯರಾಣಿ ಸಿರಿವಾರ ಅವರು ಮಾತನಾಡಿ, ಡಾ. ಅಂಬೇಡ್ಕರ್ ಅವರು ಮಹಿಳಾ ಹಕ್ಕುಗಳಿಗಾಗಿ ನೀಡಿದ ಹೋರಾಟ ಮತ್ತು ಅವರು ರೂಪಿಸಿದ ಕಾನೂನುಗಳು ಇಂದಿನ ಮಹಿಳೆಯರ ಸಬಲೀಕರಣಕ್ಕೆ ಹೇಗೆ ಪೂರಕವಾಗಿವೆ ಎಂಬುದನ್ನು ವಿವರಿಸಿದರು.

ಗಣ್ಯರ ಉಪಸ್ಥಿತಿ:ಕಾರ್ಯಕ್ರಮದಲ್ಲಿ ದೇವಪುತ್ರಪ್ಪ ಪೋತ್ನಾಳ, ಮೌನೇಶ ತಡಕಲ್, ಸುಭಾಷ, ಕರಿಯಪ್ಪ, ಲಕ್ಷ್ಮಿ, ಸುನಂದಾ, ಮೋಕ್ಷಮ್ಮ, ರತ್ನಮ್ಮ, ರಾಜೇಶ್ವರಿ, ಹುಲಿಗೆಮ್ಮ ಸೇರಿದಂತೆ ಅನೇಕ ಮುಖಂಡರು ಹಾಗೂ ಸಂಘಟನೆಯ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಶ್ರೀ ಭಗೀರಥ ಮಹರ್ಷಿ ಜಯಂತಿ



**ಮಾನ್ವಿ :** ಪಟ್ಟಣದ ತಹಶೀಲ್ದಾರ್ ಕಚೇರಿಯ ಸಭಾಂಗಣದಲ್ಲಿ ತಾಲೂಕು ಆಡಳಿತ ವತಿಯಿಂದ ನಡೆದ ಶ್ರೀ ಭಗೀರಥ ಮಹರ್ಷಿ ಜಯಂತಿ ಕಾರ್ಯಕ್ರಮವನ್ನು ಶ್ರೀ ಭಗೀರಥ ಮಹರ್ಷಿಗಳ ಭಾವಚಿತ್ರಕ್ಕೆ ಪೂಜೆಸಲ್ಲಿಸುವ ಮೂಲಕ ಉದ್ಘಾಟಿಸಿ ಮಾತನಾಡಿ ಶ್ರೀ ಭಗೀರಥ ಮಹರ್ಷಿಗಳು ಕಠಿಣವಾದ ತಪಸ್ಸಿನ ಮೂಲಕ ಶಿವನಿಂದ ದೇವ ಗಂಗೆಯನ್ನು ಭೂಮಿಗೆ ತಂದು ಸಗರನ ಪುತ್ರರಿಗೆ ಮುಕ್ತಿಯುನ್ನು ಕಲ್ಪಿಸಿದನ್ನು ಎಂದು ನಮ್ಮ ಪರಂಪರೆಯಿಂದ ತಿಳಿದು ಬರುತ್ತದೆ ಶ್ರೀ ಭಗೀರಥ ಮಹರ್ಷಿಗಳ ತತ್ವಗಳನ್ನು ಪ್ರತಿಯೊಬ್ಬರು ಕೂಡ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳುವಂತೆ ತಿಳಿಸಿದರು.

ಉಪ್ಪರ ಸಮಾಜದ ಶಿಕ್ಷಕರಾದ ಶ್ರೀನಿವಾಸ್‌ರವರು ಶ್ರೀ ಭಗೀರಥ ಮಹರ್ಷಿಗಳ ಕುರಿತು ಉಪನ್ಯಾಸ ನೀಡಿದರು.

ವಿವಿಧ ಕ್ಷೇತ್ರಗಳ ಸಾಧನೆ ಮಾಡಿದ ಸಾಧಕರಾದ ಶ್ರೀನಿವಾಸ್, ವೀರೇಶ್, ಶಾಂತಪ್ಪ, ವೆಂಕಟೇಶ್ ಉಪ್ಪಾರ್ , ಪ್ರಗತಿಪರ ರೈತ ಅಳ್ಳಪ್ಪರವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಈರಣ್ಣ ಆರೋಲಿ,ರಾಘವೇಂದ್ರ ಹಿರೇಕೊಟ್ನೆಕಲ್, ರಾಮಲಿಂಗಪ್ಪ ಮಾನ್ವಿ ,ವೆಂಕಟೇಶ್ ಹಿರೇಕೋಟ್ನೇಕಲ್, ತಿರುಪತಿ ಮಾನ್ವಿ,ಶ್ರೀಮಂತ ಸಾಗರ್ ಕೊಟ್ನೆಕಲ್, ಲೋಕೇಶ್ ಮಾಳಗಿ , ಹಳ್ಳಪ್ಪ ಮಾನ್ವಿ, ಹುಸೇನ್ ಉಪ್ಪಾರ,ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಇದ್ದರು.

# ಬಾಗಲವಾಡದಲ್ಲಿ ಮಹಿಳಾ ಜಾಗೃತ ಸಂಘಟನೆಯಿಂದ ಸಂಭ್ರಮದ 'ಅಂಬೇಡ್ಕರ್ ಹಬ್ಬ'



ಧೈರ್ಯದ ದಾರಿ

**ಸಿರಿವಾರ:** ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಜಯಂತಿ ಅಂಗವಾಗಿ ತಾಲ್ಲೂಕಿನ ಬಾಗಲವಾಡ ಗ್ರಾಮದಲ್ಲಿ ಮಹಿಳಾ ಜಾಗೃತ ಸಂಘಟನೆಯ ವತಿಯಿಂದ ಬುಧವಾರ 'ಅಂಬೇಡ್ಕರ್ ಹಬ್ಬ'ವನ್ನು ಅತ್ಯಂತ ಅರ್ಥಪೂರ್ಣವಾಗಿ ಆಚರಿಸಲಾಯಿತು.

ಮಹಿಳೆಯರು ಸಮಾಜದ ಮುಖ್ಯವಾಹಿನಿಗೆ ಬರಲಿ: ಚಿನ್ನಮ್ಮ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಸಂಘಟನೆಯ ಅಧ್ಯಕ್ಷೆ ಚಿನ್ನಮ್ಮ, "ಕಳೆದ 25 ವರ್ಷಗಳಿಂದ ನಮ್ಮ ಸಂಘಟನೆಯು ಮಹಿಳೆಯರ ಏಳಿಗೆಗಾಗಿ ನಿರಂತರವಾಗಿ ಶ್ರಮಿಸುತ್ತಿದೆ. ಮಹಿಳೆಯರು ಮನೆಯ ನಾಲ್ಕು ಗೋಡೆಗಳಿಗೆ ಸೀಮಿತವಾಗದೆ ಸಮಾಜದ ಮುಖ್ಯವಾಹಿನಿಗೆ ಬರಬೇಕು. ಕೂಲಿ ಕಾರ್ಮಿಕರು ತಮ್ಮ ಹಕ್ಕುಗಳಿಗಾಗಿ ಧ್ವನಿ ಎತ್ತಬೇಕು," ಎಂದು ಹೇಳಿದರು.

ಬಾಬಾಸಾಹೇಬರ ವಿಚಾರಧಾರೆಗಳು ಕೇವಲ ಭಾಷಣಗಳಿಗೆ ಸೀಮಿತವಾಗಬಾರದು. ಮಹಿಳೆಯರು ಸಂಘಟಿತರಾದಾಗ ಮಾತ್ರ ಸಮಾಜದಲ್ಲಿ ಬದಲಾವಣೆ ಸಾಧ್ಯ. ಅಂಬೇಡ್ಕರ್ ಅವರ ಆಶಯದಂತೆ ಶಿಕ್ಷಣ ಮತ್ತು ಸಂಘಟನೆಗೆ ನಾವೆಲ್ಲರೂ ಹೆಚ್ಚಿನ ಒತ್ತು ನೀಡಬೇಕು ಎಂದು ಅವರು ಕರೆ ನೀಡಿದರು.

ವೈಚಾರಿಕ ಪುಸ್ತಕಗಳ ಬಿಡುಗಡೆ

ಇದೇ ವೇದಿಕೆಯಲ್ಲಿ ಮಹಿಳಾ ಜಾಗೃತಿ ಮತ್ತು ನಾಯಕತ್ವದ ಕುರಿತಾದ 'ದಲಿತ ಜಾಗೃತ ಮಹಿಳಾ ಕೂಲಿ ಕಾರ್ಮಿಕರ ನಡಿಗೆ' ಹಾಗೂ 'ಸಮುದಾಯ ನಾಯಕತ್ವ' ಎಂಬ ಎರಡು ಪ್ರಮುಖ ಪುಸ್ತಕಗಳನ್ನು ಬಿಡುಗಡೆಗೊಳಿಸಲಾಯಿತು.

ವೈಚಾರಿಕ ಕಾರ್ಯಕ್ರಮಕ್ಕೆ ಮೆಚ್ಚುಗೆ

ಗ್ರಾಮ ಪಂಚಾಯತ್ ಮಾಜಿ ಅಧ್ಯಕ್ಷ ಹಾಗೂ ವಕೀಲ ತಿಪ್ಪಣ್ಣ ಮಾತನಾಡಿ, ಗ್ರಾಮ ಮಟ್ಟದಲ್ಲಿ ಇಂತಹ ವೈಚಾರಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿರುವ ಮಹಿಳಾ ಸಂಘಟನೆಯ ಕಾರ್ಯ ನಿಜಕ್ಕೂ ಶ್ಲಾಘನೀಯ ಎಂದು ಬೆನ್ನು ತಟ್ಟಿದರು.

ಮಹಾಶಕ್ತಿ ಮಹಿಳಾ ಸಬಲೀಕರಣ ಸಂಘಟನೆಯ ರಾಜ್ಯಾಧ್ಯಕ್ಷೆ ವಿಜಯರಾಣಿ ಸಿರಿವಾರ ಅವರು ಮಾತನಾಡಿ, ಡಾ. ಅಂಬೇಡ್ಕರ್ ಅವರು ಮಹಿಳಾ ಹಕ್ಕುಗಳಿಗಾಗಿ ನೀಡಿದ ಹೋರಾಟ ಮತ್ತು ಅವರು ರೂಪಿಸಿದ ಕಾನೂನುಗಳು ಇಂದಿನ ಮಹಿಳೆಯರ ಸಬಲೀಕರಣಕ್ಕೆ ಹೇಗೆ ಪೂರಕವಾಗಿವೆ ಎಂಬುದನ್ನು ವಿವರಿಸಿದರು.

ಗಣ್ಯರ ಉಪಸ್ಥಿತಿ:

ಕಾರ್ಯಕ್ರಮದಲ್ಲಿ ದೇವಪುತ್ರಪ್ಪ ಪೋತ್ನಾಳ, ಮೌನೇಶ ತಡಕಲ್, ಸುಭಾಷ, ಕರಿಯಪ್ಪ, ಲಕ್ಷ್ಮಿ, ಸುನಂದಾ, ಮೋಕ್ಷಮ್ಮ, ರತ್ನಮ್ಮ, ರಾಜೇಶ್ವರಿ, ಹುಲಿಗೆಮ್ಮ ಸೇರಿದಂತೆ ಅನೇಕ ಮುಖಂಡರು ಹಾಗೂ ಸಂಘಟನೆಯ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಇಂಗ್ಲಿಷ್ ಭಾಷಾ ನೈಪುಣ್ಯ ವಿದ್ಯಾರ್ಥಿ ಜೀವನದ ಯಶಸ್ಸಿನ ಸೋಪಾನ- ಡಾ. ಸಯ್ಯದ್ ಮುಜೀಬ್ ಅಹ್ಮದ್





ಧೈರ್ಯದ ದಾರಿ

ವೈಯಕ್ತಿಕ ಜೀವನ ಮತ್ತು ವೃತ್ತಿ ಜೀವನದ ಯಶಸ್ಸಿಗೆ ಇಂಗ್ಲಿಷ್ ದಾರಿ ದೀಪವಾಗುತ್ತದೆ. ಪ್ರಸ್ತುತ ದಿನಮಾನಗಳಲ್ಲಿ ಇಂಗ್ಲಿಷ್ ಕಲಿಕೆಗೆ ಲಭ್ಯವಿರುವ ವಿಪುಲ ಅವಕಾಶಗಳನ್ನು ಬಳಸಿಕೊಂಡು ವಿದ್ಯಾರ್ಥಿಗಳು ತಮ್ಮ ಕನಸಿನ ವೃತ್ತಿ ಗಿಟ್ಟಿಸಿಕೊಂಡು ಜೀವನದಲ್ಲಿ ಯಶಸ್ಸನ್ನು ಸಾಧಿಸಬಹುದು ಎಂದು ಮಾನವಿಯ ಬಾಷುಮಿಯ ಸಾಹುಕಾರ್ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಇಂಗ್ಲಿಷ್ ವಿಭಾಗದ ಮುಖ್ಯಸ್ಥ ಡಾ. ಸೈಯದ್ ಮುಜೀಬ್ ಅಹ್ಮದ್ ಅಭಿಪ್ರಾಯಪಟ್ಟರು. ಅವರು ಪಟ್ಟಣದ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಐ ಕ್ಯೂ ಎ ಸಿ ಘಟಕ ಹಾಗೂ ಇಂಗ್ಲಿಷ್ ಅಧ್ಯಯನ ವಿಭಾಗದ ವತಿಯಿಂದ ಜರುಗಿದ ಅಂತರಾಷ್ಟ್ರೀಯ ಇಂಗ್ಲಿಷ್ ಭಾಷಾ ದಿನಾಚರಣೆ ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿ ಮಾತನಾಡಿದರು. ಇಂಗ್ಲಿಷ್ ಈಗ ವಿದೇಶಿಯರ ಭಾಷೆಯಾಗಿ ಉಳಿಯದೆ, ದೇಸೀ ಸತ್ವವನ್ನು ಹೀರಿಕೊಂಡು, ಸ್ಥಳೀಯ ಭಾಷೆಯಾಗಿ ರೂಪಾಂತರಗೊಂಡಿದೆ. ದಿನನಿತ್ಯ ಜೀವನದಲ್ಲಿ ನಮಗರಿವಿಲ್ಲದೆ ಇಂಗ್ಲಿಷ್ ಬಳಸುವ ಹಲವು ಸನ್ನಿವೇಶಗಳಿಗೆ ನಾವು ಸಾಕ್ಷಿಯಾಗುತ್ತೇವೆ ಎಂದು ತಿಳಿಸಿಹಲವು ಸುಲಭ ತಂತ್ರಗಳಿಂದ ಇಂಗ್ಲೀಷ್ ಅನ್ನು ಹೇಗೆ ಕರಗತ ಮಾಡಿಕೊಳ್ಳಬಹುದಾಗಿದೆ ಎಂದು ವಿವರಿಸಿದರು.

ವಿದ್ಯಾರ್ಥಿನಿ ಶಿಜಾ ತಯಾರಿಸಿದ ಶೇಕ್ಸ್ಪಿಯರ್ ನ ಭಾವಚಿತ್ರದ ಪೆನ್ಸಿಲ್ ಕಲಾಕೃತಿಯನ್ನು ಅನಾವರಣಗೊಳಿಸಿ ಕಾರ್ಯಕ್ರಮವನ್ನು ಉದ್ಘಾಟಿಸಿದ ಕಾಲೇಜಿನ ಪ್ರಾಂಶುಪಾಲರಾದ ಡಾ. ಕೆ. ಖಾದರ್ ಭಾಷಾ ಮಾತನಾಡಿ, ಇಂಗ್ಲೀಷ್ ಭಾಷೆ ಕೇವಲ ಭಾಷೆಯಾಗಿ ನಮಗೆ ಮುಖ್ಯವಾಗದೆ, ನಮ್ಮ ಯೋಚನಾ ಲಹರಿಯನ್ನು ಬದಲಿಸಿದ ಮತ್ತು ಆಧುನಿಕ ಜಗತ್ತಿಗೆ ನಮ್ಮನ್ನು ಪರಿಚಯಿಸಿದ ಅವಕಾಶಗಳ ಏಣಿಯಾಗಿದೆ ಎಂದು ಅಭಿಪ್ರಾಯಪಟ್ಟು ಇಂಗ್ಲೀಷ್ ಭಾಷೆ ಹೇಗೆ ನಮ್ಮ ಜೀವನದ ಎಲ್ಲ ಸ್ತರಗಳಲ್ಲಿ ಹಾಸು ಹೊಕ್ಕಾಗಿದೆ ಎಂದು ಮಾರ್ಮಿಕವಾಗಿ ವಿವರಿಸಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಇಂಗ್ಲೀಷ್ ವಿಭಾಗದ ಮುಖ್ಯಸ್ಥ ಡಾ. ಚನ್ನಬಸವ ಮಾತನಾಡಿ ಕಾರ್ಯಕ್ರಮದ ಔಚಿತ್ಯವನ್ನು ವಿವರಿಸಿ, ಇಂಗ್ಲಿಷ್ ಭಾಷೆ ಮತ್ತು ಸಾಹಿತ್ಯಕ್ಕೆ ವಿಲಿಯಂ ಶೇಕ್ಸ್ಪಿಯರ್ ನ ಕೊಡುಗೆಗಳನ್ನು ಸ್ಮರಿಸಿದರು. ಉಪನ್ಯಾಸಕ ತಿಮ್ಮಯ್ಯ ಉನ್ನತ ಶಿಕ್ಷಣದಲ್ಲಿ ಇಂಗ್ಲಿಷಿನ ಪಾತ್ರವನ್ನು ವಿವರಿಸಿದರು. ವಿದ್ಯಾರ್ಥಿ ಸಂತೋಷ್ ಶೇಕ್ಸ್ಪಿಯರ್ ಪೋಷಾಕಿನಲ್ಲಿ ಶೇಕ್ಸ್ಪಿಯರ್ ನ ಜೀವನ ಮತ್ತು ಸಾಧನೆಗಳನ್ನು ಸಾದ್ಯಂತವಾಗಿ ಪ್ರಸ್ತುತಪಡಿಸಿದನು. ವಿದ್ಯಾರ್ಥಿಗಳಾದ ಶಿವರಾಜ್, ಸುನೀತಾ, ಶಾಹಿನ್, ವಿದ್ಯಾಶ್ರೀ, ಅನಿತಾ ಶೇಕ್ಸ್ಪಿಯರ್ ಸಾಹಿತ್ಯದ ವಿವಿಧ ಆಯಾಮಗಳನ್ನು ಕುರಿತು ಮಾತನಾಡಿದರು.

ವಿದ್ಯಾರ್ಥಿ ಶರಣು ಸ್ವಾಗತಿಸಿದರು, ಪಲ್ಲವಿ ವಂದಿಸಿದರು ಹಾಗೂ ಶಿಜಾ ನಿರೂಪಿಸಿದರು. ಕಾರ್ಯಕ್ರಮದಲ್ಲಿ ಸಹ ಪ್ರಾಧ್ಯಾಪಕ ಡಾ.ವೆಂಕಟರಮಣ, ಸಹಾಯಕ ಪ್ರಾಧ್ಯಾಪಕರಾದ ಡಾ.ದೇವಿದಾಸ, ಮೌಲಾ ಸಾಬ್, ರಾಜೇಶ ಹನುಮೇಶ, ಗಂಗಾಬಾಯಿ, ಉಪನ್ಯಾಸಕರಾದ ಮಹಾದೇವ, ನರಸಣ್ಣ, ನಾಗರಾಜ, ರಾಕೇಶ್, ನೀಲಕಂಠಪ್ಪ,ಬಸವರಾಜ, ಪ್ರವೀಣ ಕುಮಾರ್, ಕಚೇರಿ ಅಧೀಕ್ಷಕ ಗೋಪಾಲಕೃಷ್ಣ, ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಎಸ್‌ಎಸ್‌ಎಲ್‌ಸಿ: ಸರ್ವೋದಯ ಶಾಲೆಗೆ ಶೇ. 95ರಷ್ಟು ಅದ್ಭುತ ಫಲಿತಾಂಶ

ಧೈರ್ಯದ ದಾರಿ



ಅನ್ನಂ ದಾಸ್ ಶಾಲಿನಿ
**594/625(ಶೇ. 95.04%).**



ಸೈಯಾದ್ ಕ್ವನಿತಾ ಫಾಹಿಮ್
**574/625(ಶೇ. 91.84%).**



ಲಾವಣ್ಯ
**573/625(ಶೇ. 91.68%).**

**ಮಾನ್ವಿ-**ಇಲ್ಲಿನ ಪ್ರತಿಷ್ಠಿತ ಸರ್ವೋದಯ ಶಿಕ್ಷಣ ಸಂಸ್ಥೆಯ ಪ್ರೌಢಶಾಲಾ ವಿದ್ಯಾರ್ಥಿಗಳು ಈ ಬಾರಿಯು ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಅತ್ಯುತ್ತಮ ಸಾಧನೆ ತೋರಿದ್ದು, ಶಾಲೆಗೆ ಶೇ. 95ರಷ್ಟು ಅದ್ಭುತ ಫಲಿತಾಂಶ ಲಭಿಸಿದೆ.

ಪರೀಕ್ಷೆಗೆ ಹಾಜರಾಗಿದ್ದ ಒಟ್ಟು 60 ವಿದ್ಯಾರ್ಥಿಗಳಲ್ಲಿ 9 ವಿದ್ಯಾರ್ಥಿಗಳು ಅತ್ಯುನ್ನತ ಶ್ರೇಣಿಯಲ್ಲಿ (ಡಿಸ್ಟಿಂಕ್ಷನ್) ಉತ್ತೀರ್ಣರಾಗಿದ್ದಾರೆ. ಉಳಿದಂತೆ 17 ವಿದ್ಯಾರ್ಥಿಗಳು ಪ್ರಥಮ ದರ್ಜೆ, 18 ವಿದ್ಯಾರ್ಥಿಗಳು ದ್ವಿತೀಯ ದರ್ಜೆ ಹಾಗೂ 13 ವಿದ್ಯಾರ್ಥಿಗಳು ತೇರ್ಗಡೆಯಾಗುವ ಮೂಲಕ ಶಾಲೆಗೆ ಕೀರ್ತಿ ತಂದಿದ್ದಾರೆ ಎಂದು ಶಾಲಾ ಆಡಳಿತ ಮಂಡಳಿ ತಿಳಿಸಿದೆ.

**ಪ್ರಥಮ ಸ್ಥಾನ:**ಅನ್ನಂ ದಾಸ್ ಶಾಲಿನಿ (ತಂದೆ: ಅನ್ನಂ ದಾಸ್ ದೇವದಾಸ್) 594/625 ಅಂಕಗಳು (ಶೇ. 95.04%).

**ದ್ವಿತೀಯ ಸ್ಥಾನ:**ಸೈಯಾದ್ ಕ್ವನಿತಾ ಫಾಹಿಮ್ (ತಂದೆ: ಸೈಯದ್ ಕಮರುದ್ದೀನ್) 574/625 ಅಂಕಗಳು (ಶೇ. 91.84%).

**ತೃತೀಯ ಸ್ಥಾನ:** ಲಾವಣ್ಯ (ತಂದೆ: ಮುನಿಯಪ್ಪ ಅಯ್ಯೋ) 573/625 ಅಂಕಗಳು (ಶೇ. 91.68%).

**ಆಡಳಿತ ಮಂಡಳಿ ಹರ್ಷ ಹಾಗೂ ಅಭಿನಂದನೆ:**

**ವಿದ್ಯಾರ್ಥಿಗಳ ಈ ಅತ್ಯುತ್ತಮ ಸಾಧನೆಯನ್ನು ಶ್ಲಾಘಿಸಿರುವ ಸಂಸ್ಥೆಯ ಆಡಳಿತ ಮಂಡಳಿಯು ಉತ್ತಮ ಅಂಕ ಪಡೆದ ವಿದ್ಯಾರ್ಥಿಗಳಿಗೆ, ಅವರ ಬೆನ್ನೆಲುಬಾಗಿ ನಿಂತ ಪೋಷಕರಿಗೆ ಹಾಗೂ ಸೂಕ್ತ ಮಾರ್ಗದರ್ಶನ ನೀಡಿದ ಶಿಕ್ಷಕ ವೃಂದಕ್ಕೆ ವಿಶೇಷ ಅಭಿನಂದನೆಗಳನ್ನು ಸಲ್ಲಿಸಿದೆ.**

**ಈ ಹರ್ಷದ ಸಂದರ್ಭದಲ್ಲಿ ಸಂಸ್ಥೆಯ ಆಡಳಿತ ಮಂಡಳಿ ಅಧ್ಯಕ್ಷರಾದ ಮನೋಜ್ ಕುಮಾರ್ ಮಿಶ್ರಾ, ಅನಿಲ್ ಕುಮಾರ ಹೆಚ್, ಆಂಜನೇಯು ಎಚ್. ಹಾಗೂ ಶಾಲೆಯ ಮುಖ್ಯೋಪಾಧ್ಯಾಯರಾದ ರಂಗಪ್ಪ ಅವರು ಉಪಸ್ಥಿತರಿದ್ದು, ಮಕ್ಕಳ ಮುಂದಿನ ಭವಿಷ್ಯ ಉಜ್ವಲವಾಗಲಿ ಎಂದು ಸಂತಸ ವ್ಯಕ್ತಪಡಿಸಿದ್ದಾರೆ.**

# ಮಹಿಳಾ ವಿರೋಧಿ ರಾಜಕೀಯಕ್ಕೆ ತಕ್ಕ ಪಾಠ: ಜಿಲ್ಲಾಧ್ಯಕ್ಷೆ ನಾಗರತ್ನಮೂರ್ತಿ ಅನಪುರ

**ಯಾದಗಿರಿ: ಏ.23:**ಮಹಿಳಾ ಮೀಸಲಾತಿ ಮಸೂದೆ ವಿಚಾರದಲ್ಲಿ ಕಾಂಗ್ರೆಸ್ ಮತ್ತು ಅದರ ಮಿತ್ರಪಕ್ಷಗಳ ನಡೆಗೆ ತೀವ್ರ ವಿರೋಧ ವ್ಯಕ್ತಪಡಿಸಿ, ಜಾತ್ಯಾತೀತ ಜನತಾ ದಳ (ಜೆಡಿಎಸ್) ಜಿಲ್ಲಾ ಮಹಿಳಾ ಘಟಕದ ನೇತೃತ್ವದಲ್ಲಿ ಬುಧವಾರ ನಗರದಲ್ಲಿ ಭಾರೀ ಪ್ರತಿಭಟನೆ ನಡೆಯಿತು. ಪ್ರಧಾನಮಂತ್ರಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಮಹಿಳೆಯರ ರಾಜಕೀಯ ಸಬಲೀಕರಣದ ದಿಸೆಯಲ್ಲಿ ಮುಂದಿಟ್ಟ ಮಹತ್ವಾಕಾಂಕ್ಷಿ ಮಹಿಳಾ ಮೀಸಲಾತಿ ಯೋಜನೆಗೆ ಕಾಂಗ್ರೆಸ್ ಅಡ್ಡಿಪಡಿಸಿದೆ ಎಂದು ಪ್ರತಿಭಟನಾಕಾರರು ಆರೋಪಿಸಿದರು.

ಜಿಲ್ಲಾ ಮಹಿಳಾ ಘಟಕದ ಅಧ್ಯಕ್ಷೆ ನಾಗರತ್ನಮೂರ್ತಿ ಅನಪುರ ಅವರ ನೇತೃತ್ವದಲ್ಲಿ ಜಿಲ್ಲೆಯ ವಿವಿಧ ಭಾಗಗಳಿಂದ ಆಗಮಿಸಿದ ಸಾವಿರಾರು ಮಹಿಳಾ ಕಾರ್ಯಕರ್ತರು ನಗರದ ನೇತಾಜಿ ಸರ್ಕಲ್‌ನಲ್ಲಿ ಜಮಾಯಿಸಿ ಕಾಂಗ್ರೆಸ್ ವಿರುದ್ಧ ತೀವ್ರ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಈ ವೇಳೆ ಮಾತನಾಡಿದ ನಾಗರತ್ನಮೂರ್ತಿ ಅನಪುರ, “ದೇಶದ ಮಹಿಳೆಯರಿಗೆ ರಾಜಕೀಯದಲ್ಲಿ ಸಮಾನ ಅವಕಾಶ ಕಲ್ಪಿಸಲು ಉದ್ದೇಶಿತವಾಗಿದ್ದ ಮಹಿಳಾ ಮೀಸಲಾತಿ ಮಸೂದೆಯನ್ನು ಕಾಂಗ್ರೆಸ್ ಹಾಗೂ ಅದರ ಮಿತ್ರಪಕ್ಷಗಳು ಉದ್ದೇಶಪೂರ್ವಕವಾಗಿ ತಡೆಯುವ ಮೂಲಕ ತಮ್ಮ ಮಹಿಳಾ ವಿರೋಧಿ ನಿಲುವನ್ನು ಬಹಿರಂಗಪಡಿಸಿವೆ,” ಎಂದು ಆರೋಪಿಸಿದರು. ಮಾಜಿ ಪ್ರಧಾನಮಂತ್ರಿ ದೇವೇಗೌಡ ಅವರ ಕಾಲದಲ್ಲಿಯೂ ಇದೇ ರೀತಿಯ ರಾಜಕೀಯ ಅಡ್ಡಿಪಡಿತ ನಡೆ ಕಂಡುಬಂದಿತ್ತು ಎಂದು ಅವರು ಟೀಕಿಸಿದರು.

ದೇಶದಲ್ಲಿ ಮಹಿಳೆಯರು ಸಮ ಪ್ರಮಾಣದಲ್ಲಿ ಇದ್ದರೂ, ರಾಜಕೀಯ ಪ್ರತಿನಿಧಿತ್ವದಲ್ಲಿ ಶೇ.33 ಮೀಸಲಾತಿ ಇನ್ನೂ ಸಾಕಾರವಾಗದಿರುವುದು ದುಃಖಕರ ಸಂಗತಿ ಎಂದು ಹೇಳಿದ ಅವರು, “ಕಾಂಗ್ರೆಸ್ ಪಕ್ಷದ ನಿಲುವು ಹಾಗೂ ಅದಕ್ಕೆ ಬೆಂಬಲ ನೀಡುವ




ಕೆಲವು ಪಕ್ಷಗಳ ಮನೋಭಾವದಿಂದ ಈ ಪ್ರಕ್ರಿಯೆಗೆ ಹಿನ್ನಡೆಯಾಗಿದೆ. ಮುಂದಿನ ದಿನಗಳಲ್ಲಿ ಮಹಿಳೆಯರು ಇದಕ್ಕೆ ತಕ್ಕ ಉತ್ತರ ನೀಡಲಿದ್ದಾರೆ,” ಎಂದು ಎಚ್ಚರಿಸಿದರು.

ಪಕ್ಷದ ಯುವ ಮುಖಂಡೆ ಪರಿಮಳ ಪಾಟೀಲ ಚಾಮನಹಳ್ಳಿ ಮಾತನಾಡಿ, “ಕಳೆದ ಹಲವು ದಶಕಗಳಿಂದಲೂ ಕಾಂಗ್ರೆಸ್ ಮಹಿಳೆಯರ ಹಿತಾಸಕ್ತಿಗೆ ವಿರುದ್ಧವಾಗಿ ನಡೆದುಕೊಂಡಿದೆ. ಇದೀಗ ಮೀಸಲಾತಿ ವಿಚಾರದಲ್ಲೂ ಅದೇ ನಿಲುವು ಮರುಕಳಿಸಿದೆ,” ಎಂದು ಟೀಕಿಸಿದರು. ರಾಜ್ಯದಲ್ಲಿ ‘ಗ್ಯಾರಂಟಿ’ ಯೋಜನೆಗಳ ಹೆಸರಿನಲ್ಲಿ ಮಹಿಳೆಯರನ್ನು ಮರುಳುಗೊಳಿಸುವ ಪ್ರಯತ್ನ ನಡೆಯುತ್ತಿದೆ ಎಂದು ಆರೋಪಿಸಿ, ಮಹಿಳೆಯರು ಜಾಗೃತರಾಗಿ ರಾಜಕೀಯವಾಗಿ ಸೂಕ್ತ ನಿರ್ಧಾರ ಕೈಗೊಳ್ಳಬೇಕು ಎಂದು ಕರೆ ನೀಡಿದರು.

ಪ್ರತಿಭಟನೆಯ ಬಳಿಕ ಮಹಿಳಾ ಕಾರ್ಯಕರ್ತರು ಜಿಲ್ಲಾಧಿಕಾರಿ ಕಚೇರಿಯ ಅಪರ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಿದರು.

ಸುಡುವ ಬಿಸಿಲಲ್ಲೂ 40 ನಿಮಿಷ ಹೋರಾಟ: ಬೆಳಿಗ್ಗೆ ಸುಮಾರು 10 ಗಂಟೆಗೆ ನೇತಾಜಿ ಸರ್ಕಲ್‌ನಲ್ಲಿ ಜಮಾಯಿಸಿದ ಜೆಡಿಎಸ್ ಮಹಿಳಾ ಕಾರ್ಯಕರ್ತರು ಹಾಗೂ ಜಿಲ್ಲಾಧ್ಯಕ್ಷ ಸುಭಾಷಚಂದ್ರ ಕಟಕಟಿ ಸೇರಿದಂತೆ ಮುಖಂಡರು ಸುಮಾರು 40 ನಿಮಿಷಗಳ ಕಾಲ ನಿರಂತರ ಪ್ರತಿಭಟನೆ ನಡೆಸಿದರು. ಪ್ರತಿಭಟನೆ ಹಿನ್ನೆಲೆಯಲ್ಲಿ ಸ್ವಲ್ಪ ಸಮಯ ಸಂಚಾರದಲ್ಲಿ ವ್ಯತ್ಯಯ ಉಂಟಾದರೂ, ಪೊಲೀಸರು ಬಿಗಿ ಬಂದೋಬಸ್ತ್ ಕೈಗೊಂಡು ವಾಹನಗಳನ್ನು ಪರ್ಯಾಯ ಮಾರ್ಗಗಳಿಗೆ ತಿರುಗಿಸುವ ಮೂಲಕ ಪರಿಸ್ಥಿತಿಯನ್ನು ನಿಯಂತ್ರಿಸಿದರು. ಮಹಿಳಾ ಕಾರ್ಯಕರ್ತರು ಜೆಡಿಎಸ್ ಧ್ವಜಗಳನ್ನು ಹಾರಿಸಿ, ಎಚ್.ಡಿ.ದೇವೇಗೌಡ, ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಹಾಗೂ ಶಾಸಕ ಶರಣಗೌಡ ಕಂದಕೂರ ಪರ ಘೋಷಣೆಗಳನ್ನು ಕೂಗಿದರು. ಸುಡುವ ಬಿಸಿಲನ್ನೂ ಲೆಕ್ಕಿಸದೇ ಮಹಿಳೆಯರು ಉತ್ಸಾಹದಿಂದ ಭಾಗವಹಿಸಿದ್ದು ಗಮನ ಸೆಳೆಯಿತು.

ಶಾರದಾ ಕಡೇಚೂರ (ಗುರುಮಠಕಲ್), ಜಯಶ್ರೀ ಪೋಲಿಸ್ ಪಾಟೀಲ್ (ಗುರುಮಠಕಲ್), ನರ್ಮದಾ ಅವಂಗಪೂರ (ಗುರುಮಠಕಲ್), ಪರಿಮಳ ಪಾಟೀಲ್ ಚಾಮನಹಳ್ಳಿ, ಅಶ್ವಿನಿ ಹೊಸಮನಿ (ಯಡ್ಡಳ್ಳಿ), ಸಾವಿತ್ರಮ್ಮ (ಯಡ್ಡಳ್ಳಿ), ವಿಜಯಲಕ್ಷ್ಮಿ (ಹತ್ತಿಕುಣಿ), ಇಂದಿರಾ ಕೊಳ್ಳಿ (ಹೊನಗೇರಾ), ಶಶಿಕಲಾ ಬಿರಾದಾರ (ಹುಣಸಗಿ), ಸಂಗೀತ ಚವ್ಹಾಣ (ಚಾಮನಹಳ್ಳಿ ತಾಂಡಾ), ಅನಸೂಯಾ ದಂತಾಪೂರ, ಸಿಂದಿಂಗಮ್ಮ (ಯಲ್ಲೇರಿ), ಸುಭಾಷಚಂದ್ರ ಕಟಕಟಿ (ಹೊನಗೇರಾ), ವಿಶ್ವನಾಥ್ ಸಿರವಾರ, ಬಂದಪ್ಪ ಅರಳಿ, ಮಲ್ಲನಗೌಡ ಹಳಮನಿ (ಕೌಳೂರ), ಅಜಯ್ ರೆಡ್ಡಿ (ಯಲ್ಲೇರಿ), ದೇವಿಂದ್ರಪ್ಪ (ಸುರಪುರ), ಕುಮಾರ್ ಗೌಡ (ಹುಣಸಗಿ), ಶರಣಗೌಡ ಆರ್ ಹೊಸಳ್ಳಿ, ಈಶ್ವರ ರಾಠೋಡ, ಜಯೇಂದ್ರ ಚೌವ್ಹಾಣ, ಯಂಕೋಬಾ ಕಂಚಗಾರಹಳ್ಳಿ, ಮಲ್ಲಿಕಾರ್ಜುನ ಮರಂಕಲ್, ಧರ್ಮೇಶ್ ಟಿ. ವಡಗೇರಾ ಸೇರಿದಂತೆ ಹಲವರು ಭಾಗವಹಿಸಿದ್ದರು.

# ಡ್ರಗ್ಸ್ ವ್ಯಸನಿಗಳಿಗೆ ಹೆಚ್.ಐ.ವಿ ತಪಾಸಣೆ: ಜಿಲ್ಲಾಧಿಕಾರಿ ಸೂಚನೆ



**ಮಂಗಳೂರು**–ಮಾದಕ ವಸ್ತು ವ್ಯಸನಿಗಳಿಗೆ ಹೆಚ್.ಐ.ವಿ ರೋಗದ ಬಗ್ಗೆ ಪರೀಕ್ಷೆ ನಡೆಸುವ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ದರ್ಶನ್ ಹೆಚ್ ವಿ ಸೂಚಿಸಿದ್ದಾರೆ.

ಅವರು ಬುಧವಾರ ಜಿಲ್ಲಾಧಿಕಾರಿ ಕಚೇರಿಯಲ್ಲಿ ನಡೆದ ಮಿಷನ್ ಏಡ್ಸ್ ಸುರಕ್ಷಾ ಅಭಿಯಾನದ ಗುರಿಗಳನ್ನು ಜಿಲ್ಲಾಮಟ್ಟದಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಕುರಿತ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜಿಲ್ಲೆಯಲ್ಲಿ ಡ್ರಗ್ಸ್ ಪ್ರಕರಣಗಳು ಹೆಚ್ಚಿನ ಸಂಖ್ಯೆಯಲ್ಲಿ ಪತ್ತೆಯಾಗಿದ್ದು, ಈ ನಿಟ್ಟಿನಲ್ಲಿ ಮಿಷನ್ ಏಡ್ಸ್ ಅಭಿಯಾನದಡಿ ಅಗತ್ಯ ಕ್ರಮ ಕೈಗೊಳ್ಳಲು ಅವರು ಸೂಚಿಸಿದರು. ಜಿಲ್ಲೆಯ ಎಲ್ಲಾ ಖಾಸಗಿ ಕ್ಲಿನಿಕ್, ನರ್ಸಿಂಗ್ ಹೋಂ, ಆಸ್ಪತ್ರೆಗಳು ಹೆಚ್.ಐ.ವಿ ಪ್ರಕರಣಗಳ ಬಗ್ಗೆ ಆರೋಗ್ಯ ಇಲಾಖೆಗೆ ಮಾಹಿತಿ ನೀಡಬೇಕು. ಪ್ರಮುಖ ಜನಸಂದಣಿ ಘಟಕ, ಕೈಗಾರಿಕೆಗಳು, ವಲಸೆ ಕಾರ್ಮಿಕರಲ್ಲಿ ಹೆಚ್.ಐ.ವಿ ತಪಾಸಣೆ ಬಗ್ಗೆ ಸಹಕರಿಸಲು ಸಂಬಂಧಿಸಿದ ಇಲಾಖೆಗೆ ಸೂಚಿಸಲಾಗುವುದು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು. ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿ ಡಾ. ಖತೀಜಾ ದಿಲ್‌ಶಾದ್ ಮಾತನಾಡಿ, ಮಿಷನ್ ಏಡ್ಸ್ ಸುರಕ್ಷಾ ಅಭಿಯಾನದಡಿ, ಹೆಚ್.ಐ.ವಿ ಬಾಧಿತರ ಪೈಕಿ ಶೇಕಡ 95 ರಷ್ಟು ಮಂದಿಗೆ ತಮ್ಮ ಹೆಚ್.ಐ.ವಿ ಸ್ಥಿತಿಯ ಬಗ್ಗೆ ಅರಿವು ಮೂಡಿಸುವುದು, ಸೂಕ್ತ ಚಿಕಿತ್ಸೆ ಪಡೆದು ಮತ್ತು ವೈರಸ್ ನಿಯಂತ್ರಿಸುವುದು ಆದ್ಯತೆಯಾಗಿರುತ್ತದೆ. ಜಿಲ್ಲೆಯಲ್ಲಿ ಮಾರ್ಚ್ ಅಂತ್ಯದವರೆಗೆ ಹೆಚ್.ಐ.ವಿ ಭಾಧಿತರಲ್ಲಿ ಶೇ. 85.23 ರಷ್ಟು ಮಂದಿ ಚಿಕಿತ್ಸೆ ಪಡೆದಿರುತ್ತಾರೆ ಎಂದರು.

ಜಿಲ್ಲೆಯಲ್ಲಿ 21 ಕೌನ್ಸಿಲಿಂಗ್ ಮತ್ತು ಪರೀಕ್ಷಾ ಕೇಂದ್ರಗಳು, 9 ಎ.ಆರ್.ಟಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದೆ. ಪ್ರಸ್ತುತ ಜಿಲ್ಲೆಯಲ್ಲಿ 4663 ಹೆಚ್.ಐ.ವಿ ಸಕ್ರಿಯ ಪ್ರಕರಣಗಳು ಇವೆ. ಕಳೆದ ವರ್ಷ ಜಿಲ್ಲೆಯಲ್ಲಿ 84893 ಹೆಚ್.ಐ.ವಿ ಪರೀಕ್ಷೆ ಮಾಡಲಾಗಿದ್ದು, ಈ ಪೈಕಿ 293 ಪಾಸಿಟಿವ್ ಪ್ರಕರಣಗಳು ಪತ್ತೆಯಾಗಿದೆ. ಇದುವರೆಗೆ ಜಿಲ್ಲೆಯಲ್ಲಿ ಹೆಚ್.ಐ.ವಿ ಯಿಂದ 2972 ಮರಣ ಪ್ರಕರಣಗಳು ವರದಿಯಾಗಿದೆ ಎಂದು ತಿಳಿಸಿದರು.

ಸಭೆಯಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶೆ ಜೈಬುನ್ನೀಸ, ದ.ಕ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಜಯಲಕ್ಷ್ಮಿ ರಾಯಕೋಡ್ , ಅಪರ ಜಿಲ್ಲಾಧಿಕಾರಿ ರಾಜು ಕೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಎಚ್.ಆರ್. ತಿಮ್ಮಯ್ಯ, ಉಪಸ್ಥಿತರಿದ್ದರು.

# ಭೂಮಿಯನ್ನು ಮುಂದಿನ ಪೀಳಿಗೆಗೆ ನೀಡುವುದು ನಮ್ಮ ಕರ್ತವ್ಯ

**ಸೈದಾಪುರ:ಏ.23:** ಇಂದು ಪರಿಸರ ಮಾಲಿನ್ಯ, ಅರಣ್ಯ ನಾಶ, ನೀರಿನ ಕೊರತೆ, ಹವಾಮಾನ ಬದಲಾವಣೆ ಇತ್ಯಾದಿ ಸಮಸ್ಯೆಗಳು ದಿನದಿಂದ ದಿನಕ್ಕೆ ಹೆಚ್ಚುತ್ತಿವೆ. ಈ ಸಮಸ್ಯೆಗಳನ್ನು ತಡೆಯಲು ಕೇವಲ ಜಾಗೃತಿ ಸಾಕಾಗುವುದಿಲ್ಲ, ಕಾನೂನು ಅರಿವು ಪಡೆದು ಈ ಭೂಮಿಯ ಪರಿಸರವನ್ನು ನಮ್ಮ ಮುಂದಿನ ಪೀಳಿಗೆಗೆ ನೀಡುವುದು ನಮ್ಮ ಕರ್ತವ್ಯವಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ನ್ಯಾಯಧೀಶ ಮರಿಯಪ್ಪ ಅಭಿಪ್ರಾಯಪಟ್ಟರು.

ಸಮೀಪದ ಕಡೇಚೂರು ಗ್ರಾಮ ಪಂಚಾಯತಯಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ವತಿಯಿಂದ ಏರ್ಪಡಿಸಿದ ವಿಶ್ವ ಭೂ ದಿನದ ಅಂಗವಾಗಿ ಕಾನೂನು ಅರಿವು–ನೆರವು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಭೂಮಿ ನಮ್ಮ ಜೀವನದ ಆಧಾರ. ನಾವು ಉಸಿರಾಡುವ ಗಾಳಿ, ಕುಡಿಯುವ ನೀರು, ತಿನ್ನುವ ಆಹಾರ ಇವೆಲ್ಲವೂ ಭೂಮಿಯೇ ಕೊಟ್ಟ ಅಮೂಲ್ಯವಾದ ಕಾಣಿಕೆಗಳು. ಇವುಗಳನ್ನು ಕಾಪಾಡಿಕೊಂಡು ಹೋಗಲು ದೇಶದಲ್ಲಿ ಪರಿಸರ ರಕ್ಷಣೆಗೆ ಅನೇಕ ಕಾನೂನುಗಳು ಜಾರಿಯಲ್ಲಿವೆ. ಆದರೆ ಅವುಗಳ ಬಗ್ಗೆ ಸರಿಯಾದ ತಿಳುವಳಿಕೆ ಅನೇಕ ಜನರಿಗೆ ಇಲ್ಲದಿರುವುದೇ ಕಳವಳದ ಸಂಗತಿಯಾಗಿದೆ. ನಮ್ಮ ಹಕ್ಕುಗಳ ಜೊತೆ ಕರ್ತವ್ಯಗಳನ್ನು ತಿಳಿದುಕೊಳ್ಳುವುದು ಬಹಳ ಮುಖ್ಯ. ಪರಿಸರವನ್ನು ಹಾಳು ಮಾಡುವ ಯಾವುದೇ ಕೃತ್ಯ ಕಾನೂನಿನ ಪ್ರಕಾರ ಶಿಕ್ಷಾರ್ಹವಾಗಿದೆ ಎಂಬುದನ್ನು ನಾವು ಮರೆಯಬಾರದು ಎಂದರು ಹಾಗೂ ಮಹಿಳೆಯರ, ಮಕ್ಕಳ ಮತ್ತು ಬಾಲ್ಯವಿವಾಹ ಸೇರಿದಂತೆ ವಿವಿಧ



ಕಾನೂನುಗಳು, ಸರ್ಕಾರದ ಯೋಜನೆಗಳ ಮಾಹಿತಿ ಮತ್ತು ಉಚಿತ ಕಾನೂನು ನೆರವು ಪಡೆಯುವ ವಿಧಾನಗಳ ಬಗ್ಗೆ ವಿವರಿಸಿದರು.

ಈ ವೇಳೆ ಸಂಪನ್ಮೂಲ ವ್ಯಕ್ತಿ ಸಹಾಯಕ ಕಾನೂನು ನೆರವು ಅಭೀರಕ್ಷಕಿ ಸುಷ್ಮಾ ಜಾದವ್, ಪಿಎಲ್.ವಿ ಭೀಮಣ್ಣ ವಡವಟ್, ಬನ್ನಪ್ಪ ಸಜ್ಜನ್, ಸಂಗಪ್ಪ ಸಜ್ಜನ್, ಕಾಶಿನಾಥ ಶೆಟ್ಟಿಹಳ್ಳಿ, ರಜಿನಿಕಾಂತ, ಗ್ರಂಥಪಾಲಕಿ ಕವಿತಾ, ಶಿಲ್ಪಾ, ಗ್ರಾ.ಪಂ. ಸಿಬ್ಬಂದಿ ಬಾಬು ಸೇರಿದಂತೆ ಗ್ರಾಮಸ್ಥರು ಇದ್ದರು.

# ಜೆಡಿಎಸ್ ಅಧ್ಯಕ್ಷರ ಹೇಳಿಕೆ ಖಂಡನೀಯ: ಪ್ರಶಾಂತ ಸುಂಗಲಕರ್

**ಯಾದಗಿರಿ:ಏ.23:** ಗುರುಮಠಕಲ್ ಮತಕ್ಷೇತ್ರದ ಹತ್ತಿಕುಣಿ ಜಲಾಶಯದ ನಾಲೆಗಳ ಆಧುನೀಕರಣ ಕಾಮಗಾರಿಗೆ ಸಂಬಂಧಿಸಿದಂತೆ ಜಿಲ್ಲಾ ಜೆಡಿಎಸ್ ಅಧ್ಯಕ್ಷ ಸುಭಾಷಚಂದ್ರ ಕಟಕಟಿ ನೀಡಿರುವ ಹೇಳಿಕೆ ಖಂಡನೀಯ ಎಂದು ಕಾಂಗ್ರೆಸ್ ಯುವ ಮುಖಂಡ ಪ್ರಶಾಂತ ಸುಂಗಲಕರ್ ತೀವ್ರವಾಗಿ ಪ್ರತಿಕ್ರಿಯಿಸಿದ್ದಾರೆ.



ಬುಧವಾರ ಹೊರಡಿಸಿದ ಪತ್ರಿಕಾ ಪ್ರಕಟಣೆಯಲ್ಲಿ ಅವರು, ಈ ಕಾಮಗಾರಿಯ ಅನುಷ್ಠಾನದಲ್ಲಿ ಸಚಿವ Priyank Kharge ಅವರ ಪಾತ್ರ ಮಹತ್ವದ್ದಾಗಿದೆ ಎಂದು ಸ್ಪಷ್ಟಪಡಿಸಿದರು. ಯೋಜನೆಗೆ ಸಂಬಂಧಿಸಿದಂತೆ ವಿವಿಧ ಹಂತಗಳಲ್ಲಿ ಸರ್ಕಾರದ ಸಹಕಾರ ದೊರೆತಿದ್ದು, ಅದನ್ನು ನಿರ್ಲಕ್ಷಿಸುವುದು ಸರಿಯಲ್ಲ ಎಂದು ಹೇಳಿದ್ದಾರೆ.

ಶಾಸಕ ಶರಣಗೌಡ ಕಂದಕೂರ ಅವರು ಕೇಂದ್ರ ಜಲಶಕ್ತಿ ಸಚಿವ V. Somanna ಅವರಿಗೆ ಮನವಿ ಸಲ್ಲಿಸಿ, ಕೇಂದ್ರ ಸರ್ಕಾರದಿಂದ 72 ಕೋಟಿ ರೂಪಾಯಿ ಅನುದಾನ ಮಂಜೂರು ಮಾಡಿಸಿದ್ದಾರೆ ಎಂಬ ಕಟಕಟಿ ಹೇಳಿಕೆ ವಾಸ್ತವಾಧಾರವಿಲ್ಲದದ್ದು ಎಂದು ಆರೋಪಿಸಿದ್ದಾರೆ.ಸಂಬಂಧವಿಲ್ಲದ ವಿಚಾರಗಳಲ್ಲಿ ಸಚಿವ ಪ್ರಿಯಾಂಕ್ ಖರ್ಗೆ ಅವರ ಹೆಸರನ್ನು ಎಳೆದು ತರುವುದು ಸಮಂಜಸವಲ್ಲ ಎಂದು ಪ್ರಶ್ನಿಸಿದ ಅವರು, ರಾಜಕೀಯ ಲಾಭಕ್ಕಾಗಿ ತಪ್ಪು ಮಾಹಿತಿ ಹರಡುವುದು ಜನರಿಗೆ ತಪ್ಪು ಸಂದೇಶ ನೀಡುತ್ತದೆ ಎಂದು ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ರಾಜಕೀಯ ಪ್ರಚಾರಕ್ಕಾಗಿ ವಾಸ್ತವಗಳನ್ನು ವಕ್ರೀಕರಿಸುವ ಬದಲು, ಅಭಿವೃದ್ಧಿ ಕಾಮಗಾರಿಗಳ ಬಗ್ಗೆ ನಿಖರ ಮಾಹಿತಿ ನೀಡುವುದು ಅಗತ್ಯ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

# ತಾಲೂಕಿನ ಎಸ್. ಎಸ್ .ಎಲ್. ಸಿ ಒಟ್ಟು ಫಲಿತಾಂಶ ಶೇ 92.64 ರಷ್ಟು : ಚಂದ್ರಶೇಖರ್.ಡಿ,



ಧೈರ್ಯದ ದಾರಿ

**ಮಾನ್ವಿ:** ತಾಲೂಕಿನ ಮಾನ್ವಿ ಮತ್ತು ಸಿರವಾರ ಸೇರಿ ಅಖಂಡ ತಾಲೂಕಿನಲ್ಲಿ 2025–26ನೇ ಸಾಲಿನ ಎಸ್. ಎಸ್ .ಎಲ್. ಸಿ ಪರೀಕ್ಷೆಗೆ ಕುಳಿತ 5141ವರಲ್ಲಿ 4763 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದು ಒಟ್ಟು ಶೇ 92.64 ರಷ್ಟು ಫಲಿತಾಂಶ ದಾಖಲಾಗಿದೆ.

ಅದರಲ್ಲಿ 29 ಶಾಲೆಗಳು ಶೇ 100ರಷ್ಟು ಫಲಿತಾಂಶ ಪಡೆದರೆ 43 ಸರಕಾರಿ ಪ್ರೌಢಶಾಲೆಗಳಲ್ಲಿ 3295 ವಿದ್ಯಾರ್ಥಿಗಳು ಪರೀಕ್ಷೆಗೆ ಕುಳಿತ್ತಿದು ಅವರಲ್ಲಿ 2960 ಶೇ 89.83 ರಷ್ಟು ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ 6 ಸರಕಾರಿ ಶಾಲೆಗಳು ಶೇ 100 ರಷ್ಟು ಫಲಿತಾಂಶ ಪಡೆದರೆ 11 ವಸತಿ ಶಾಲೆಗಳಲ್ಲಿ ಪರೀಕ್ಷೆಗೆ ಕುಳಿತವರು 512 ಉತ್ತೀರ್ಣರಾದವರು 512 ಶೇ100 ಫಲಿತಾಂಶ ಪಡೆಯುವ ಮೂಲಕ ಸಾಧನೆ ತೋರಿವೆ.

ಒಂದು ಅನುದಾನಿತ ಶಾಲೆಯಲ್ಲಿ 63 ಪರೀಕ್ಷೆಗೆ ಕುಳಿತು ಅವರಲ್ಲಿ62 ವಿದ್ಯಾರ್ಥಿಗಳು ಉತ್ತೀರ್ಣರಾಗಿದು ಶೇ 98.41 ಫಲಿತಾಂಶ ಬಂದಿದೆ. 30 ಅನುದಾನ ರಹಿತ ಶಾಲೆಗಳಲ್ಲಿ ಒಟ್ಟು ಪರೀಕ್ಷೆಗೆ ಕುಳಿತವರು 1271 ಪಾಸಾದವರು 1229ಶೇ 96.69 ರಷ್ಟು ಫಲಿತಾಂಶ ಪಡೆದರೆ ಅದರಲ್ಲಿ 12 ಶಾಲೆಗಳು ಶೇ.100 ಫಲಿತಾಂಶ ಪಡೆದಿವೆ. ಅಖಂಡ ತಾಲೂಕಿನಲ್ಲಿ ಒಟ್ಟು ಶೇ 92.64 ರಷ್ಟು ಫಲಿತಾಂಶ ದಾಖಲಾಗಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಚಂದ್ರಶೇಖರ.ಡಿ, ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಂಸ್ಕೃತಿಯ ಉಳಿವಿಗೆ ಭಾಷೆಯ ಉಳಿವು ಮುಖ್ಯ–ಡಾ. ಶಿವಕುಮಾರ್ ಹೊಸೊಳಿಕೆ



**ಸುಳ್ಯ:**ಸಂಸ್ಕೃತಿಯ ಉಳಿವಿಗೆ ಭಾಷೆಯ ಉಳಿವು ಅತ್ಯಂತ ಮುಖ್ಯ. ಅರೆಭಾಷೆಯ ಮೂಲಕ ಅನೇಕ ಆಚಾರ–ವಿಚಾರ, ಸಂಸ್ಕೃತಿಗಳನ್ನು ಅರಿಯುವುದರ ಜೊತೆಗೆ ಅದರೊಳಗೆ ಬದುಕು ಕಂಡುಕೊಳ್ಳಲು ಸಾಧ್ಯವಾಗುತ್ತಿದೆ ಎಂದು ವಿ.ಟಿ.ಯು. ಬೆಳಗಾವಿ ವಿಶ್ರಾಂತ ಪ್ರಾದೇಶಿಕ ನಿರ್ದೇಶಕ ಡಾ.ಶಿವಕುಮಾರ್ ಹೊಸೊಳಿಕೆ ಹೇಳಿದರು.

ಅವರು ಬೆಳ್ಳಾರೆಯ ಡಾ.ಕೆ. ಶಿವರಾಮ ಕಾರಂತ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ನಡೆದ 'ಅರೆಭಾಷೆ ಐಸಿರಿ' ಅಂತರ್ ಕಾಲೇಜು ಸ್ಪರ್ಧಾ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕರ್ನಾಟಕ ಅರೆಭಾಷೆ ಸಂಸ್ಕೃತಿ ಮತ್ತು ಸಾಹಿತ್ಯ ಅಕಾಡೆಮಿ ಅಧ್ಯಕ್ಷ ಸದಾನಂದ ಮಾವಜಿ ಮಾತನಾಡಿ, ಅರೆಭಾಷೆಯ ಬೆಳವಣಿಗೆ ಮತ್ತು ಅದರ ಮಹತ್ವವನ್ನು ಪಸರಿಸುವ ಉದ್ದೇಶದಿಂದ ಶಾಲೆ–ಕಾಲೇಜುಗಳಲ್ಲಿ ವಿವಿಧ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದರು.

ಕಾಲೇಜಿನ ಪ್ರಾಂಶುಪಾಲ ಬಾಲಸುಬ್ರಮಣ್ಯ ಪಿ.ಎಸ್, ವಿದ್ಯಾರ್ಥಿ ಕ್ಷೇಮಪಾಲನಾ ಅಧಿಕಾರಿ ಡಾ.ರಾಮಚಂದ್ರ ಕೆ. ಮಾತನಾಡಿದರು. ಕಾರ್ಯಕ್ರಮದಲ್ಲಿ ಅಕಾಡೆಮಿ ಸದಸ್ಯರಾದ ಲತಾಪ್ರಸಾದ್ ಕುದ್ಪಾಜೆ ಹಾಗೂ ಡಾ.ಕೆ. ಶಿವರಾಮ ಕಾರಂತ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ವಿದ್ಯಾರ್ಥಿ ಸಂಘದ ಅಧ್ಯಕ್ಷ ಲಿಖಿನ್ ಎಸ್., ಉಪಾಧ್ಯಕ್ಷ ಪ್ರಿಯಾಂಕ ಬಿ.ಎಚ್., ಕಾರ್ಯದರ್ಶಿ ಶ್ರೇಯಾ ಎ.ಪಿ., ಸಂಯೋಜಕ ಮನೋಜ್ ಉಪಸ್ಥಿತರಿದ್ದರು.

ಅರೆಭಾಷೆ ಅಕಾಡೆಮಿ ಸದಸ್ಯರಾದ ಚಂದ್ರಶೇಖರ ಪೇರಾಲು ಸ್ವಾಗತಿಸಿ ಪ್ರಸ್ತಾವನೆಗೈದರು. ಡಾ.ಎನ್.ಎ. ಜ್ಞಾನೇಶ್ ಉದ್ಘಾಟಕರ ಪರಿಚಯ ವಾಚಿಸಿದರು. ಶ್ರೇಯಾ ಎ.ಪಿ. ವಂದಿಸಿ, ಚಂದ್ರಾವತಿ ಬಡ್ಡಡ್ಕ ಕಾರ್ಯಕ್ರಮ ನಿರೂಪಿಸಿದರು.

# ಸಮಾನತೆ ಸಾರಿ ಜಗ ಬೆಳಗಿದ ಬಸವ: ವೀರಣ್ಣ ಯಾರಿ



**ವಾಡಿ:ಏ.23:** ಪಟ್ಟಣದ ಬಿಜೆಪಿ ಕಛೇರಿಯಲ್ಲಿ ವಿಶ್ವ ಗುರು ಬಸವಣ್ಣನವರ 893 ನೇ ಜಯಂತಿ ಆಚರಿಸಲಾಯಿತು.

ಈ ವೇಳೆ ಬಿಜೆಪಿ ಅಧ್ಯಕ್ಷ ವೀರಣ್ಣ ಯಾರಿ ಅವರು ಮಾತನಾಡಿ ಎನಗಿಂತ ಕಿರಿಯರಿಲ್ಲ, ಶಿವಭಕ್ತರಿಗಿಂತ ಹಿರಿಯರಿಲ್ಲ ಎನ್ನುವ ಮೂಲಕ ಮಾನವೀಯತೆ ಮತ್ತು ಸಮಾನತೆಯ ತತ್ವಗಳೊಂದಿಗೆ ಜಗ ಬೆಳಗಿದ ಬಸವ ಎಂದರು. ನಾನು ಎಂಬ ಅಹಂ ಬಿಟ್ಟು ನಾವು ಎಂಬ ಭಾವನೆಯ ಬದುಕು ಸಾಗಿಸಬೇಕು ಎಂದು ತಿಳಿಸಿ,ಹನ್ನೆರಡನೆಯ ಶತಮಾನದಲ್ಲಿ ಬಸವಣ್ಣನವರು ಹೆಣ್ಣಿನ ಬಗ್ಗೆ ಅತ್ಯಂತ ಅಭಿಮಾನದಿಂದ ದನಿ ಎತ್ತಿದ್ದಾರೆ. ಹೆಣ್ಣಿನ ಬಗ್ಗೆ ಭಾರತೀಯ ವೈದಿಕ ಸಂಸ್ಕೃತಿಯಲ್ಲಿ ಆಳವಾಗಿ ಬೇರೂರಿದ್ದ ಕೀಳುಭಾವನೆಯನ್ನು, ಅಸಮಾನತೆಯನ್ನು ಬಸವಣ್ಣನವರ ಈ ಚಳವಳಿ ತೊಡೆದು ಹಾಕಿದೆ. ಹೆಣ್ಣು ಮಾಯೆಯಲ್ಲ, ಆತ್ಮಕ್ಕೆ ಲಿಂಗಭೇದವಿಲ್ಲ, ಹೆಣ್ಣು ಅಸ್ಪೃಶ್ಯಳಲ್ಲ. ಹೆಣ್ಣು ಪ್ರತ್ಯಕ್ಷ ದೇವತೆ, ಪರಸ್ತ್ರೀ ಪಾರ್ವತಿಯ ಸಮಾನ ಎಂದು ಸಾರುವ ಮೂಲಕ ಸ್ತ್ರೀ ಸಮಾನತೆಯನ್ನು ಪ್ರತಿಪಾದಿಸಿದ ಹಿರಿಮೆ ಬಸವಣ್ಣನವರಿಗೆ ಮತ್ತು ಅವರ ಸಮಕಾಲೀನ ಶರಣರಿಗೆ ಸಲ್ಲುತ್ತದೆ.ವರ್ಣರಹಿತ ಸಮಾಜ ನಿರ್ಮಾಣ,ಅಸ್ಪೃಶ್ಯತೆ ನಿವಾರಣೆ, ಅನುಭವ ಮಂಟಪದ ಮೂಲಕ ಪ್ರಜಾಪ್ರಭುತ್ವ ವ್ಯವಸ್ಥೆ, ಲಿಂಗ ಸಮಾನತೆ, ಕಾಯಕ ಮತ್ತು ದಾಸೋಹದ ಮೂಲಕ ಆರ್ಥಿಕ ನ್ಯಾಯ, ವಚನಗಳಲ್ಲಿ ಮಾನವ ಹಕ್ಕುಗಳ ಪ್ರತಿಪಾದನೆ, ಅಂತರಜಾತೀಯ ವಿವಾಹದಂತಹ ಕ್ರಾಂತಿಕಾರಕ ಕಾರ್ಯಗಳನ್ನು ಮಾಡುವ ಮೂಲಕ ಸೃಷ್ಟಿಯಲ್ಲಿ ಸರ್ವರಿಗೂ ಸಮಪಾಲು ಎಂದು ಸಾರಿದ ಸಾಂಸ್ಕೃತಿಕ ನಾಯಕ ಎಂದು ಹೇಳಿದರು. ಈ ಸಂದರ್ಭದಲ್ಲಿ ಯಮನಪ್ಪ ಸವನಳ್ಳಿ,ಶರಣಗೌಡ ಚಾಮನೂರ, ಅಶೋಕ ಹರನಾಳ,ಅರ್ಜುನ ಕಾಳೆಕರ,ಗಿರಿಮಲ್ಲಪ್ಪ ಕಟ್ಟಿಮನಿ, ಭೀಮರಾವ ದೊರೆ,ಪ್ರಕಾಶ ಪುಜಾರಿ,ಹರಿ ಗಲಾಂಡೆ,ಅಯ್ಯಣ್ಣ ದಂಡೊತಿ,ಮಲ್ಲಿಕಾರ್ಜುನ ಸಾತಖೇಡ,ಯಂಕಮ್ಮ ಗೌಡಗಾಂವ, ನಿರ್ಮಲ ಇಂಡಿ,ಉಮಾಭಾಯಿ ಗೌಳಿ ಸೇರಿದಂತೆ ಇತರರು ಇದ್ದರು.

# ಪಾಕ್‌ನಿಂದ ಡಬಲ್ ಗೇಮ್:ಇರಾನ್ ಆರೋಪ



**ಟೆಹ್ರಾನ್,ಏ.23–**ಇರಾನ್‌ನ ಸರ್ಕಾರಿ ಮಾಧ್ಯಮವು ಪಾಕಿಸ್ತಾನದ ಸೇನಾ ಮುಖ್ಯಸ್ಥ ಅಸಿಮ್ ಮುನೀರ್ ಅವರನ್ನು ಗುರಿಯಾಗಿಸಿಕೊಂಡು, ಅವರು "ಡಬಲ್ ಗೇಮ್" ಆಡುತ್ತಿದ್ದಾರೆ ಎಂದು ಆರೋಪಿಸಿದೆ. ಇಸ್ಲಾಮಾಬಾದ್ ಇರಾನ್‌ನೊಂದಿಗೆ ಸಮಾನಾಂತರ ಸಂಪರ್ಕಗಳನ್ನು ಕಾಯ್ದುಕೊಳ್ಳುತ್ತಿದೆ ಮತ್ತು ಅಮೆರಿಕದ ಪರವಾಗಿ ಉಳಿದಿದೆ ಎಂದು ಹೇಳಿದೆ.

ಪಾಕಿಸ್ತಾನದ ಫೀಲ್ಡ್ ಮಾರ್ಷಲ್ ಅಸಿಮ್ ಮುನೀರ್ ಅವರನ್ನು ಇರಾನ್ ಅಮೆರಿಕದ ಏಜೆಂಟ್ ಎಂದು ಬಣ್ಣಿಸಿದೆ. ಇರಾನ್‌ನ ಸರ್ಕಾರಿ ಮಾಧ್ಯಮಗಳು ಪಾಕಿಸ್ತಾನದ ನಿಷ್ಪಕ್ಷಪಾತತೆಯನ್ನು ಪ್ರಶ್ನಿಸಿರುವುದು ಇದೇ ಮೊದಲು. ಪಾಕಿಸ್ತಾನವು ನಿಷ್ಪಕ್ಷಪಾತ ಎಂದು ನಟಿಸುತ್ತಾ ಆದರೆ ಅಮೆರಿಕದ ಕಡೆಗೆ ವಾಲುತ್ತಿರುವ "ಡಬಲ್ ಗೇಮ್" ಆಡುತ್ತಿದೆ ಎಂದು ಇರಾನ್ ಸರ್ಕಾರಿ ಮಾಧ್ಯಮ ಅಭಿಪ್ರಾಯಪಟ್ಟಿದೆ. ಅಸಿಮ್ ಮುನೀರ್ ಇರಾನಿನ ನಾಯಕರೊಂದಿಗೆ ವೈಯಕ್ತಿಕ ಸಂಪರ್ಕ ಹೊಂದಿದ್ದಾರೆಂದು ನಟಿಸುತ್ತಿದ್ದಾರೆ, ಆದರೆ ವಾಸ್ತವದಲ್ಲಿ ಅವರು ಯುನೈಟೆಡ್ ಸ್ಟೇಟ್ಸ್‌ಗಾಗಿ ಕೆಲಸ ಮಾಡುತ್ತಿದ್ದಾರೆ ಎಂದು ಅದು ಹೇಳುತ್ತದೆ.

ಇರಾನ್‌ನ ಪ್ರಸ್ತಾಪಗಳನ್ನು ನಿರ್ಲಕ್ಷಿಸಲಾಗುತ್ತಿದೆ ಎಂದು ಟಿವಿ ಚರ್ಚೆಗಳು ಚರ್ಚಿಸಿದವು. ಜನರಲ್ ಮುನೀರ್ ಇತ್ತೀಚೆಗೆ ಇರಾನ್‌ಗೆ ಭೇಟಿ ನೀಡಿ ಅಮೆರಿಕದ ಕಡೆಯಿಂದ 10 ಅಂಶಗಳ ಮಾತುಕತೆಯ ಪ್ರಸ್ತಾಪವನ್ನು ಮಂಡಿಸಿದ್ದಾರೆ, ಆದರೆ ಇಲ್ಲಿಯುವರೆಗೆ ಯಾವುದೇ ಪ್ರತಿಕ್ರಿಯೆ, ಸ್ವೀಕಾರ ಬಂದಿಲ್ಲ.ಪಾಕಿಸ್ತಾನವು ಈ ಪ್ರಸ್ತಾಪವನ್ನು ನಿರ್ಲಕ್ಷಿಸಿದೆ ಮತ್ತು ಈಗ ಅಮೆರಿಕದ ಪರವಾಗಿ ಇರಾನ್ ಮೇಲೆ 15 ರಿಂದ 16 ಹೊಸ ಷರತ್ತುಗಳನ್ನು ವಿಧಿಸಲು ಪ್ರಯತ್ನಿಸುತ್ತಿದೆ ಎಂದು ಇರಾನಿನ ತಜ್ಞರು ಆರೋಪಿಸಿದ್ದಾರೆ, ಇದು ಅದರ ನಿಲುವಿನ ಬಗ್ಗೆ ಪ್ರಶ್ನೆಗಳನ್ನು ಹುಟ್ಟುಹಾಕಿದೆ.

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಇತ್ತೀಚೆಗೆ ಕದನ ವಿರಾಮ ವಿಸ್ತರಣೆಯನ್ನು ಘೋಷಿಸಿದರು, ಜನರಲ್ ಮುನೀರ್ ಮತ್ತು ಪಾಕಿಸ್ತಾನಿ ಪ್ರಧಾನಿ ಶಹಬಾಜ್ ಷರೀಫ್ ಅವರ ಕೋರಿಕೆಯ ಮೇರೆಗೆ ಈ ಕ್ರಮ ಕೈಗೊಳ್ಳಲಾಗಿದೆ ಎಂದು ಹೇಳಿದರು. ಒಪ್ಪಂದಕ್ಕೆ ಬರದಿದ್ದರೆ ಮಿಲಿಟರಿ ಕ್ರಮ ಕೈಗೊಳ್ಳುವುದಾಗಿ ಅವರು ಈ ಹಿಂದೆ ಎಚ್ಚರಿಸಿದ್ದರು. ಪ್ರಧಾನಿ ಶಹಬಾಜ್ ಷರೀಫ್ ಈ ನಿರ್ಧಾರವನ್ನು ಸ್ವಾಗತಿಸಿದರು, ಇದು ನಡೆಯುತ್ತಿರುವ ರಾಜತಾಂತ್ರಿಕ ಪ್ರಯತ್ನಗಳನ್ನು ವಿಸ್ತರಿಸುವ ಒಂದು ಹೆಜ್ಜೆಯಾಗಿದೆ ಎಂದು ಕರೆದಿದ್ದಾರೆ ಮತ್ತು ದಿನಾಂಕವನ್ನು ಘೋಷಿಸಲಾಗಿಲ್ಲವಾದರೂ ಪಾಕಿಸ್ತಾನದಲ್ಲಿ ಮುಂದಿನ ಸುತ್ತಿನ ಮಾತುಕತೆಗಳು ನಡೆಯುವ ಬಗ್ಗೆ ದೃಢಪಡಿಸಿದ್ದಾರೆ. ಏತನ್ಮಧ್ಯೆ, ಇರಾನಿನ ಮಾಧ್ಯಮಗಳು ಈ ಬೆಳವಣಿಗೆಗಳನ್ನು ಪಾಕಿಸ್ತಾನದ ಸಾರ್ವಜನಿಕ ಸಂಪರ್ಕ ತಂತ್ರವೆಂದು ತಳ್ಳಿಹಾಕಿದವು, ನಿಜವಾದ ಮಾತುಕತೆ ಪ್ರಕ್ರಿಯೆಯು ಸ್ಥಗಿತಗೊಂಡಿದೆ ಮತ್ತು ಪ್ರಗತಿಯ ನೋಟವನ್ನು ಮಾತ್ರ ಸೃಷ್ಟಿಸಲಾಗುತ್ತಿದೆ ಎಂದು ಹೇಳಿಕೊಂಡವು.

# ಸಪ್ತಗಿರಿ ಪದವಿ ಪೂರ್ವ ಕಾಲೇಜಿನಲ್ಲಿ ವಿಶ್ವ ಪುಸ್ತಕ ದಿನಾಚರಣೆ: ಸಾಧಕ ವಿದ್ಯಾರ್ಥಿಗಳಿಗೆ ಸತ್ಕಾರ



**ಬೀದರ್:ಏ.23:** ನಗರದ ಸಪ್ತಗಿರಿ ಪದವಿ ಪೂರ್ವ ವಿಜ್ಞಾನ ಕಾಲೇಜಿನಲ್ಲಿ ಬುಧವಾರ ವಿಶ್ವ ಪುಸ್ತಕ ದಿನಾಚರಣೆಯನ್ನು ಕರ್ನಾಟಕ ಬರಹಗಾರರ ಮತ್ತು ಕಲಾವಿದರ ಸಂಘ, ಕನ್ನಡ ಪುಸ್ತಕ ಪ್ರಾಧಿಕಾರ, ಸಿರಿಗನ್ನಡ ಪುಸ್ತಕ ಮಾರಾಟ ಮಳಿಗೆ ಹಾಗೂ ಸಪ್ತಗಿರಿ ಪದವಿ ಪೂರ್ವ ವಿಜ್ಞಾನ ಕಾಲೇಜಿನ ಸಹಯೋಗದಲ್ಲಿ ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಇದೇ ಸಂದರ್ಭದಲ್ಲಿ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಅಗ್ರ ಶ್ರೇಣಿಯಲ್ಲಿ ತೇರ್ಗಡೆಯಾದ ಸಾಧಕ ವಿದ್ಯಾರ್ಥಿಗಳನ್ನು ಶಾಲು ಹೊದಿಸಿ, ಹೂಮಾಲೆ ಹಾಕಿ ಗೌರವಿಸಲಾಯಿತು.

ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿದ ಅಮೀತ್ ದತ್ತಾತ್ರಿ, ಆದಿತ್ಯ ರಮೇಶ್, ನಯನ ಶಿವಚಂದ್ರ, ಹರ್ಷ ಮಹೇಂದ್ರಕುಮಾರ, ವಿಜಯಾ ಸತೀಶ್, ಪ್ರಿಯಾಂಕಾ ವಿಶ್ವನಾಥ್ ಸೇರಿದಂತೆ ಹಲವಾರು ವಿದ್ಯಾರ್ಥಿಗಳನ್ನು ವಿಶೇಷವಾಗಿ ಸನ್ಮಾನಿಸಲಾಯಿತು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಭದ್ರಕೋಟೆ ಸೌಹಾರ್ದ ಸಹಕಾರ ಸಂಘ ನಿಯಮಿತದ ಅಧ್ಯಕ್ಷ ಪ್ರೊ. ರಾಜೇಂದ್ರ ಬಿರಾದಾರ, ವಿದ್ಯಾರ್ಥಿಗಳು ಮೊಬೈಲ್ ಬಳಕೆಯಿಂದ ದೂರವಿದ್ದು ಪುಸ್ತಕಗಳನ್ನು ತಮ್ಮ ಗೆಳೆಯರನ್ನಾಗಿಸಿಕೊಳ್ಳಬೇಕು ಎಂದು ಕರೆ ನೀಡಿದರು. ಪುಸ್ತಕ ಓದುವ ಹವ್ಯಾಸದಿಂದ ಜ್ಞಾನ ವೃದ್ಧಿಯಾಗುವುದರ ಜೊತೆಗೆ ವ್ಯಕ್ತಿತ್ವ ವಿಕಸನಕ್ಕೂ ಸಹಕಾರಿಯಾಗುತ್ತದೆ ಎಂದು ಹೇಳಿದರು.

ಸಂಪನ್ಮೂಲ ವ್ಯಕ್ತಿ ಪ್ರಕಾಶ್ ಡಿ. ಮಾತನಾಡಿ, "ಪುಸ್ತಕಗಳು ಮೌನ ಶಿಕ್ಷಕರಂತೆ ಕಾರ್ಯನಿರ್ವಹಿಸುತ್ತವೆ. ವಿದ್ಯಾರ್ಥಿಗಳು ಪಾಠ ಪುಸ್ತಕಗಳ ಜೊತೆಗೆ ದಿನಪತ್ರಿಕೆ, ಕಾದಂಬರಿ ಹಾಗೂ ಲೇಖನಗಳನ್ನು ಓದುವ ಅಭ್ಯಾಸ ಬೆಳೆಸಿಕೊಳ್ಳಬೇಕು" ಎಂದು ಸಲಹೆ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ಬೀದರ್ ವಿಶ್ವವಿದ್ಯಾಲಯದ ವಿಶ್ರಾಂತ ಡೀನ್ ಡಾ. ಜಗನ್ನಾಥ ಹೆಬ್ಬಾಳೆ, ಪುಸ್ತಕ ಅಧ್ಯಯನದಿಂದ ಜ್ಞಾನ ವೃದ್ಧಿಯಾಗುತ್ತದೆ ಹಾಗೂ ವ್ಯಕ್ತಿತ್ವ ಬೆಳೆಯುತ್ತದೆ ಎಂದು ತಿಳಿಸಿದರು. ಮನೆಮನೆಗೆ ಗ್ರಂಥಾಲಯ ಸ್ಥಾಪಿಸುವಂತೆ ಹಾಗೂ ಕಾರ್ಯಕ್ರಮಗಳಲ್ಲಿ ಪುಸ್ತಕಗಳನ್ನು ಉಡುಗೊರೆಯಾಗಿ ನೀಡುವ ಪರಂಪರೆ ಬೆಳೆಸಬೇಕೆಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಪತ್ರಕರ್ತ ಶಿವಕುಮಾರ ಸ್ವಾಮಿ, ಕಾಲೇಜಿನ ಪ್ರಾಚಾರ್ಯ ಗೋವಿಂದ ಡಿ. ತಾಂದಳೆ ಮಾತನಾಡಿದರು. ನಾವದಗೇರಿಯ ಇಮ್ಯಾನುವೆಲ್ ಮೆಥೋಡಿಸ್ಟ್ ಚರ್ಚ್ನ ಮಾಜಿ ಕೋಶಾಧ್ಯಕ್ಷ ನರಸಣ್ಣ ಟಿ. ಉಪಸ್ಥಿತರಿದ್ದರು.

ಕರ್ನಾಟಕ ಬರಹಗಾರರ ಮತ್ತು ಕಲಾವಿದರ ಸಂಘದ ಪ್ರಧಾನ ಕಾರ್ಯದರ್ಶಿ ನಿಜಲಿಂಗಪ್ಪ ತಗಾರೆ ಸ್ವಾಗತಿಸಿದರು. ಅನಿಲಕುಮಾರ ಜಾಧವ್ ಕಾರ್ಯಕ್ರಮ ನಿರೂಪಿಸಿದರು. ಡಾ. ರಾಜಕುಮಾರ ಹೆಬ್ಬಾಳೆ ವಂದಿಸಿದರು.

ಸುಸನ್ನಾ ಹಾಗೂ ಸರಸ್ವತಿ ಅವರು ಸ್ವಾಗತ ಗೀತೆಯನ್ನು, ಸೃಷ್ಟಿ ಆರ್ ಮತ್ತು ಶಿಲ್ಪಾ ಪ್ರಾರ್ಥನೆ ಗೀತೆ ಹಾಡಿದ್ದರು.

# ಪ. ಬಂಗಾಳದಲ್ಲಿ ಕಚ್ಚಾ ಬಾಂಬ್ ಸ್ಫೋಟ ಹಲವರಿಗೆ ಗಾಯ: ತ. ನಾಡಲ್ಲಿ ಮತದಾನ ಶಾಂತಿಯುತ



**ತಮಿಳುನಾಡಿನ ಕರೂರಿನಲ್ಲಿ ತಮ್ಮ ಹಕ್ಕು ಚಲಾಯಿಸಲು ಸರದಿ ಸಾಲಿನಲ್ಲಿ ನಿಂತಿರುವ ಮತದಾರರು.**

**ನವದೆಹಲಿ,ಏ.23–** ತಮಿಳುನಾಡು ಮತ್ತು ಪಶ್ಚಿಮ ಬಂಗಾಳದಲ್ಲಿ ಇಂದು ಮತದಾನ ಬಿಗಿಭದ್ರತೆಯಲ್ಲಿ ಆರಂಭವಾಗಿದ್ದು, ತಮಿಳುನಾಡಿನಲ್ಲಿ ಮತದಾನ ಶಾಂತಿಯುತವಾಗಿ ಸಾಗಿದ್ದರೆ, ಪಶ್ಚಿಮ ಬಂಗಾಳದಲ್ಲಿ ಮತದಾನ ಸಂದರ್ಭದಲ್ಲಿ ಹಿಂಸಾಕೃತ್ಯಗಳು ನಡೆದಿವೆ.

ತಮಿಳುನಾಡಿನ ಎಲ್ಲಾ 234 ವಿಧಾನಸಭಾ ಕ್ಷೇತ್ರಗಳಿಗೆ ಇಂದು ನಡೆದಿರುವ ಮತದಾನ ಬಹುತೇಕ ಶಾಂತಿಯುತವಾಗಿದ್ದು ತಮಿಳುನಾಡಿನಾದ್ಯಂತ ಮತದಾನ ಬಿರುಸಿನಿಂದ ನಡೆದಿದೆ. ಪಶ್ಚಿಮ ಬಂಗಾಳದಲ್ಲಿ 152 ಕ್ಷೇತ್ರಗಳಿಗೆ ನಡೆದಿರುವ ಮತದಾನದ ಸಂದರ್ಭದಲ್ಲಿ ಕಚ್ಚಾ ಬಾಂಬ್ ದಾಳಿ ನಡೆದಿದ್ದು, ಹಲವರು ಗಾಯಗೊಂಡಿದ್ದಾರೆ ಎಂದು ವರದಿಗಳು ಹೇಳಿವೆ.

ಪಶ್ಚಿಮ ಬಂಗಾಳ ಮುಷಿರಾಬಾದ್ ಜಿಲ್ಲೆಯಲ್ಲಿ ಮತದಾನ ಸಂದರ್ಭದಲ್ಲಿ ಅಪರಿಚಿತ ವ್ಯಕ್ತಿಗಳು ಕಚ್ಚಾ ಬಾಂಬ್ ದಾಳಿ ನಡೆಸಿದ್ದು , ಈ ದಾಳಿಯಲ್ಲಿ ಹಲವರು ಗಾಯಗೊಂಡಿದ್ದಾರೆ. ಮುಷಿರಾಬಾದ್ ಜಿಲ್ಲೆಯ ನೌಡಾದಲ್ಲಿ ಈ ಕಚ್ಚಾ ಬಾಂಬ್ ದಾಳಿ ನಡೆದಿದ್ದು ಸ್ಥಳೀಯರಲ್ಲಿ ಭೀತಿ ಮೂಡಿಸಿದೆ. ಕಚ್ಚಾ ಬಾಂಬ್ ದಾಳಿಯ ಬಳಿಕ ಹಿಂಸಾಚಾರ ಪೀಡಿತವಾಗಿರುವ ಮುಷಿರಾಬಾದ್ ನಲ್ಲಿ ಭದ್ರತೆ ಪಶ್ಚಿಮ ಬಂಗಾಳದಲ್ಲಿ ಶೇ. 50 ರಷ್ಟು ಮತದಾನವಾಗಿದೆ.

ಪಶ್ಚಿಮ ಬಂಗಾಳ ವಿಧಾನಸಭಾ ಚುನಾವಣೆಯ ಮೊದಲ ಹಂತದ ಮತದಾನ ನಡೆದಿರುವ 152 ಕ್ಷೇತ್ರಗಳಲ್ಲಿ ಚುರುಕಿನಿಂದ ಮತದಾನ ಸಾಗಿದೆ. ಮೊದಲ ಹಂತದಲ್ಲಿ 16 ಜಿಲ್ಲೆಗಳ 152 ಕ್ಷೇತ್ರಗಳಲ್ಲಿ 1478 ಅಭ್ಯರ್ಥಿಗಳ ಹಣೆಬರಹವನ್ನು ಮತದಾರರು ನಿರ್ಧರಿಸಿದ್ದಾರೆ. ರಾಜಕೀಯ ಹಣೆಬರಹ ವಿದ್ಯುನ್ಮಾನ ಮತಯಂತ್ರದಲ್ಲಿ ಭದ್ರವಾಗಿದೆ.

**ತಮಿಳುನಾಡಿನಲ್ಲಿ ಬಿರುಸಿನ ಮತದಾನ**

234 ಸದಸ್ಯ ಬಲದ ತಮಿಳುನಾಡು ವಿಧಾನಸಭೆಗೆ ಒಂದೇ ಹಂತದಲ್ಲಿ ನಡೆದಿರುವ ಮತದಾನ ಬಿರುಸಿನಿಂದ ಸಾಗಿದ್ದು, ಬೆಳಿಗ್ಗೆ 9 ಗಂಟೆಯು ಹೊತ್ತಿಗೆ ಶೇ. 17.69 ರಷ್ಟು ಮತದಾನವಾಗಿದೆ. ಇಂದು ಬೆಳಿಗ್ಗೆ 7 ಗಂಟೆಗೆ ಮತದಾನ ಆರಂಭವಾಗಿದ್ದು ಮಧ್ಯಾಹ್ನ 2 ಗಂಟೆಯ ಹೊತ್ತಿಗೆ ತಮಿಳುನಾಡಿನಲ್ಲಿ ಶೇ. 60ರಷ್ಟು ಮತದಾನವಾಗಿದ್ದರೆ ಪಶ್ಚಿಮ ಬಂಗಾಳದಲ್ಲಿ ಶೇ. 60 ರಷ್ಟು ಮತದಾನವಾಗಿದೆ ಎಂದು ಹೇಳಲಾಗಿದೆ.

ತಮಿಳುನಾಡಿನ 234 ಕ್ಷೇತ್ರಗಳಲ್ಲಿ 4023 ಅಭ್ಯರ್ಥಿಗಳು ಕಣದಲ್ಲಿದ್ದು, ಇವರೆಲ್ಲರ ರಾಜಕೀಯ ಭವಿಷ್ಯಕ್ಕೆ ಮತದಾರರ ಮುದ್ರೆ ಹೊತ್ತಿದ್ದಾರೆ. ತಮಿಳುನಾಡಿನಲ್ಲಿ ಆಡಳಿತರೂಢ ಡಿಎಂಕೆ ಅಧಿಕಾರ ಉಳಿಸಿಕೊಳ್ಳಲು ಪ್ರಯತ್ನ ನಡೆಸಿದ್ದರೆ, ಎಐಎಡಿಎಂಕೆ ಮತ್ತು ಬಿಜೆಪಿ ಮೈತ್ರಿಕೂಟ ಮತ್ತೆ ಅಧಿಕಾರಿದ ಗದ್ದುಗೆ ಹೇರಲು ಹರಸಾಹಸ ನಡೆಸಿದೆ.

ಈ 2ರ ಮಧ್ಯೆ ನಟ ವಿಜಯನ್ ನೇತೃತ್ವದ ಟಿವಿಕೆ ಪಕ್ಷ ಕೂಡ ಮೊದಲ ಬಾರಿಗೆ ಚುನಾವಣೆಯಲ್ಲಿ ಸ್ಪರ್ಧಿಸಿದ್ದು, ಅಧಿಕಾರದ ಕನಸನ್ನು ನನಸು ಮಾಡಿಕೊಳ್ಳು ಪ್ರಯತ್ನ ನಡೆದಿದೆ. ಚುನಾವಣೆ ಮತ ಎಣಿಕೆ ಮೇ 4 ರಂದು ನಡೆಯಲಿದ್ದು, ಅಂದು ಮತದಾನ ತೀರ್ಪು ಬಹಿರಂಗಗೊಳ್ಳಲಿದೆ.

ಗಣ್ಯರ ಮತದಾನ

ತಮಿಳುನಾಡು ಮುಖ್ಯಮಂತ್ರಿ ಮತ್ತು ಡಿಎಂಕೆ ಮುಖ್ಯಸ್ಥ ಎಂ.ಕೆ. ಸ್ಟಾಲಿನ್ ಅವರ ಮಗ ಮತ್ತು ಉಪಮುಖ್ಯಮಂತ್ರಿ ಉದಯನಿಧಿ ಸ್ಟಾಲಿನ್ ಹಾಗೂ ಅವರ ಕುಟುಂಬ ಸದಸ್ಯರು ಇಂದು ಬೆಳಿಗ್ಗೆಯೇ ಚೆನ್ನೈ ಮತಗಟ್ಟೆಯಲ್ಲಿ ಮತ ಚಲಾಯಿಸಿದರು. ಸ್ಟಾಲಿನ್ ಅವರು ಕೊಳತ್ತೂರು ಕ್ಷೇತ್ರದಿಂದ ಅವರ ಮಗ ಉದಯ ನಿಧಿ ಸ್ಟಾಲಿನ್ ಚೆಪಾಕ್ ಕ್ಷೇತ್ರದಿಂದ ಸ್ಪರ್ಧಿಸಿದ್ದಾರೆ.

# ಸಂಭ್ರಮದಿಂದ ಜರುಗಿದ ಕಲ್ಲೂರ ರೋಡ್ ವೀರಭದ್ರೇಶ್ವರ ಜಾತ್ರಾ ಮಹೋತ್ಸವ



**ಚಿಂಚೋಳಿ: ಏ.23:**ತಾಲೂಕಿನ ಕಲ್ಲೂರ ರೋಡ್ ಗ್ರಾಮದಲ್ಲಿ ಪ್ರತಿವರ್ಷದಂತೆ ಈ ವರ್ಷವೂ ಕೂಡ ಶ್ರೀ ವೀರಭದ್ರೇಶ್ವರ ದೇವರ ಜಾತ್ರಾ ಮಹೋತ್ಸವ ಸಂಭ್ರಮದಿಂದ ಜರಗಿತು ಈ ಜಾತ್ರೆಯು ಐದು ದಿವಸಗಳ ವಿವಿಧ ಕಾರ್ಯಕ್ರಮಗಳು ಮಾಡಲಾಗುತ್ತಿದ್ದು ಅದರಂತೆ ಬುಧವಾರರಂದು ಸಂಜೆ 6:30 ಗಂಟೆಗೆ ಕಲ್ಲೂರ್ ರೋಡ್ ಗ್ರಾಮದ ಮುಖ್ಯ ರಸ್ತೆಯಲ್ಲಿ ಶ್ರೀ ವೀರಭದ್ರೇಶ್ವರ ದೇವರ ಜಾತ್ರೆಯ ರಥೋತ್ಸವವನ್ನು ಸಾವಿರಾರು ಜನಸಂಖ್ಯೆಯಲ್ಲಿ ಭಕ್ತರು ತೇರನ್ನು ಎಳೆಯುವ ಮುಖಾಂತರ ಜಾತ್ರಾ ಮಹೋತ್ಸವವನ್ನು ಸಂಭ್ರಮದಿಂದ ಜರುಗಿತು ಜಾತ್ರೆಯಲ್ಲಿ ಕಲ್ಲೂರ ರೋಡ್ ಗ್ರಾಮದ ಮುಖಂಡರಾದ ಸುಧರ್ಶನ್ ರೆಡ್ಡಿ ಪಾಟೀಲ ವೀರಾರೆಡ್ಡಿ ಪಾಟೀಲ, ಚಂದ್ರು ಜೊನ್ನಲ್, ಜಗನಾಥ್ ಇದಲಾಯಿ, ಅನೀಲ ಕಂಟ್ಲಿ, ಜಗದೀಶ್ ಸಜ್ಜನ್, ನಾಗರಾಜ್ ಸೇವಾತ್ಕಾರ್, ಬಸವರಾಜ್ ಕಂಟ್ಲಿ, ವಿಶ್ವನಾಥ್ ಇದಲಾಯಿ, ಜನಾರ್ಧನ ಪೂಜಾರಿ , ರಾಘವೇಂದ್ರ ಗುತ್ತೇದಾರ, ಹನಮಂತ ಬೋಯಿನ್, ಶ್ರೀಸ್ಯೆಲಂ ಹೋಟೆಲ್, ಗೋಪಾಲ್ ಭೋವಿ, ರವಿಕುಮಾರ್ ಊರೆಡಿ,ಪ್ರಭಾಕರ್ ಸ್ವಾಮಿ, ಶೇಖರ್ ಕಂಟ್ಲಿ, ರಾಮಲಿಂಗ ಕಂಟ್ಲಿ, ಆಂಬೊಜಿ ಮರಾಠ, ರವಿಕುಮಾರ್ ಕಂಟ್ಲಿ, ಶಿವಕುಮಾರ ಪಲ್ಲೆದ್, ವೆಂಕಟೇಶ್ ಭೋವಿ, ಅಭಿಷೇಕ್ ಸಜ್ಜನ, ಶಾಂತು ಭೋವಿ, ವೀರೇಶ್ ರೈಪಳ್ಳಿ, ನಾಗಿಂದ್ರ ಸುಂಟನ್, ಈಶಪ್ಪಾ ಮರಪಳ್ಳಿ, ಹರೀಶ್ ಜೊನ್ನಲ್, ರಮೇಶ ಜೊನ್ನಲ್, ಸಚಿನ್ ಪಲ್ಲೆದ್, ರಾಕೇಶ್ ಕಂಟ್ಲಿ, ಪ್ರವೀಣ್ ಕಂಟ್ಲಿ, ನಿತಿನ್ ಮಂಗಳೆಕರ್, ಯಶವಂತ್, ಅಂಜಪ್ಪ ಪೂಜಾರಿ, ಚನ್ನು, ನರೇಶ್ ಗುತ್ತೇದಾರ ಮಿರಿಯಾಣ, ಮಲ್ಲಿಕಾರ್ಜುನ ಅಣವಾರ, ಪ್ರದೀಪ್ ದೇಶಮುಖ್ ಪೊಲಕಪಳ್ಳಿ, ಮತ್ತು ಅನೇಕ ಸಾವಿರಾರು ಜನಸಂಖ್ಯೆಯಲ್ಲಿ ಕಲ್ಲೂರ ರೋಡ್ ಗ್ರಾಮಸ್ಥರು ಹಾಗೂ ತೆಲಂಗಾಣ ಆಂಧ್ರ ಪ್ರದೇಶ್ ಮತ್ತು ಕರ್ನಾಟಕ ವಿವಿಧ ಜಿಲ್ಲೆಯ ಶ್ರೀ ವೀರಭದ್ರೇಶ್ವರ ಭಕ್ತರು ಜಾತ್ರಾ ಮಹೋತ್ಸವದಲ್ಲಿ ಭಾಗಿಯಾಗಿದ್ದರು

# ಪುಸ್ತಕಗಳು ದೇಶ ಕಟ್ಟುವ ಸಾಧನಗಳು




**ಕಲಬುರಗಿ :ಏ.23:** ಪುಸ್ತಕಗಳು ಜ್ಞಾನ, ಬುದ್ಧಿ, ಮೌಲ್ಯಗಳು, ಹೊಸ ಆಲೋಚನೆಗಳು, ಸಂಸ್ಕೃತಿಗಳು, ಜನರು ಮತ್ತು ತತ್ವಚಿಂತನೆಗಳನ್ನು ಪರಿಚಯಿಸುತ್ತವೆ. ನಾಗರಿಕತೆ, ಬ್ರಹ್ಮಾಂಡ ಸೇರಿದಂತೆ ಎಲ್ಲಾ ವಿಷಯಗಳನ್ನು ತಿಳಿಸಿಕೊಡುವ ಮೂಲಕ ಜ್ಞಾನದ ಅಡಿಪಾಯವನ್ನು ನಿರ್ಮಿಸುವ ಮೂಲಕ ಸದೃಢ ಮಾನವ ಸಂಪನ್ಮೂಲ ನಿರ್ಮಾಣ ಮಾಡಿ, ಪುಸ್ತಕಗಳು ದೇಶ ಕಟ್ಟುವ ಸಾಧನಗಳಾಗಿ ಕಾರ್ಯನುರ್ವಹಿಸುತ್ತವೆ. ವಿದ್ಯಾರ್ಥಿ ದಿಸೆಯಿಂದಲೇ ಉತ್ತಮ ಪುಸ್ತಕಗಳನ್ನು ಓದುವ ಹವ್ಯಾಸ ಬೆಳೆಸಿಕೊಳ್ಳಬೇಕು ಎಂದು ಉಪನ್ಯಾಸಕ, ಲೇಖಕ ಎಚ್.ಬಿ.ಪಾಟೀಲ ಹೇಳಿದರು.

ಶಹಾಬಾದ ಪಟ್ಟಣದ ಬಸ್ ನಿಲ್ದಾಣದ ಹತ್ತಿರದ 'ವಿಜಯ ಕಂಪ್ಯೂಟರ್ ತರಬೇತಿ ಸಂಸ್ಥೆ'ಯಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಗುರುವಾರ ಜರುಗಿದ "ವಿಶ್ವ ಪುಸ್ತಕ ದಿನಾಚರಣೆ"ಯಲ್ಲಿ ಪುಸ್ತಕಗಳನ್ನು ವಿತರಿಸಿ, ಅವರು ಮಾತನಾಡಿದರು. ಸಂಸ್ಥೆಯ ಅಧ್ಯಕ್ಷ ವಾಸುದೇವ ಚವ್ಹಾಣ ಮಾತನಾಡಿ, ವಿದ್ಯಾರ್ಥಿಗಳು ಪಠ್ಯಕ್ಕೆ ಮಾತ್ರ ಸೀಮಿವಾಗದೆ, ಶ್ರೇಷ್ಠ ಸಾಧಕರ ಜೀವನ ಚರಿತ್ರೆಯ ಪುಸ್ತಕಗಳನ್ನು ಅಧ್ಯಯನ ಮಾಡಬೇಕು. ಇದು ನಿಮಗೆ ಸಾಧನೆಗೆ ಸ್ಫೂರ್ತಿ ನೀಡುತ್ತದೆ. ವ್ಯಕ್ತಿತ್ವ ವಿಕಸನಕ್ಕೆ ಪುಸ್ತಕಗಳು ಪೂರಕವಾಗಿವೆ ಎಂದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಶಿಕ್ಷಕಿಯರಾದ ರೇಷ್ಮಾ ಧೋತ್ರೆ, ಪೂರ್ಣಿಮಾ ಪೂಜಾರಿ, ದೇವಕಿ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE